ಸಂಪುಟ: 06 ಸಂಚಿಕೆ: 124 ಪುಟಗಳು: 08 ಶುಕ್ರವಾರ 17 ಜುಲೈ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಒಳ್ಳೆಯವರು ಸಂತೋಷ ಕೊಡುತ್ತಾರೆ, ಕೆಟ್ಟವರು ಅನುಭವ ನೀಡುತ್ತಾರೆ. ಬದುಕು ಸುಂದರಗೊಳ್ಳಲು ಎಲ್ಲವೂ ಬೇಕು, ಎಲ್ಲರೂ ಬೇಕು.!

# ಕೈ ಸಂಪುಟಕ್ಕೆ ಬ್ರೇಕ್! ಯಾರಿಗೆ ಲಕ್?

**ಸಂಪುಟ ವಿಸ್ತರಣೆಗೆ ತಾತ್ಕಾಲಿಕ ಬ್ರೇಕ್ ಬಿದ್ದಿದೆ. ಸಚಿವ ಸಂಪುಟ ವಿಸ್ತರಣೆ ಹಿನ್ನೆಲೆಯಲ್ಲಿ ಸಿಎಂ ಡಿಕೆ ಶಿವಕುಮಾರ್, ಮಾಜಿ ಸಿಎಂ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಬಿಕೆ ಹರಿಪ್ರಸಾದ್ ಅವರು ದೆಹಲಿಗೆ ತೆರಳಿದ್ದರು. ದೆಹಲಿಯಲ್ಲಿ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದ್ದರು. ಆದರೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಬೆಂಗಳೂರಿಗೆ ಬರುತ್ತಿರುವ ಹಿನ್ನೆಲೆಯಲ್ಲಿ ಸಂಪುಟ ವಿಸ್ತರಣೆಯ ಬಗ್ಗೆ ನಿರ್ಧಾರ ಕೈಗೊಳ್ಳಲು ಸಾಧ್ಯವಾಗಿಲ್ಲ.**

1 ಸಚಿವ ಸಂಪುಟ ಮುಂದೂಡಿಕೆ
2 ನಿರೀಕ್ಷೆಯಲ್ಲಿ ಆಕಾಂಕ್ಷಿಗಳು
3 ಹೈಕಮಾಂಡ್ ಬುಲಾವ್ ದೆಹಲಿಗೆ ತೆರಳಿದ ಸಿಎಂ ಡಿಕೆಶಿ



**ಸಂಪುಟ ಖಾತೆ ಕ್ಯಾತೆ**

**ಹೈಕಮಾಂಡ್ ಮುಂದೆ 2 ದಿನಾಂಕ ಪ್ರಸ್ತಾಪಿಸಿದ ಡಿಕೆ**

**ರಾಹುಲ್ ಜೊತೆಗೆ ಡಿಕೆಶಿ, ಸಿದ್ದು, ಹರಿಪ್ರಸಾದ್ ಮೀಟಿಂಗ್**

**ಸಂಪುಟ ವಿಸ್ತರಣೆಗೆ ತಾತ್ಕಾಲಿಕ ಬ್ರೇಕ್**

• **ಉದಯವಾಹಿನಿ, ನವದೆಹಲಿ**

ಸಚಿವ ಸಂಪುಟ ವಿಸ್ತರಣೆ ಕಸರತ್ತು ನಡೆಯುತ್ತಿರುವ ಹೊತ್ತಿನಲ್ಲೇ ಕೈ ಶಾಸಕರ ದೆಹಲಿ ಪರೇಡ್ ಶುರುವಾಗಿದೆ. ಸಚಿವ ಸ್ಥಾನದ ಆಕಾಂಕ್ಷಿಗಳು ಹೈಕಮಾಂಡ್ ನಾಯಕರ ಮನೆ ಬಾಗಿಲು ತಟ್ಟುತ್ತಿದ್ದಾರೆ. ಈಗಾಗಲೇ 20ಕ್ಕೂ ಹೆಚ್ಚು ಶಾಸಕರು ದೆಹಲಿಯಲ್ಲೇ ಬೀಡುಬಬಿಟ್ಟಿದ್ದು, ಸಚಿವ ಸ್ಥಾನಕ್ಕೆ ಪಟ್ಟು ಹಿಡಿದಿದ್ದಾರೆ. ಈ ಮಧ್ಯೆ ದೆಹಲಿಯಲ್ಲಿ ರಾಹುಲ್ ಗಾಂಧಿ ಅವರನ್ನು ಭೇಟಿಯಾಗಿರುವ ಸಿಎಂ ಡಿಕೆ ಶಿವಕುಮಾರ್ ಅವರು ಸಚಿವ ಸಂಪುಟ ವಿಸ್ತರಣೆ ಕುರಿತು ಚರ್ಚೆ ನಡೆಸಿದ್ದಾರೆ. ಸೋನಿಯಾ ಗಾಂಧಿ ನಿವಾಸದಲ್ಲಿ ರಣದೀಪ್ ಸುರ್ಜೇವಾಲ, ಕೆ.ಸಿ ವೇಣುಗೋಪಾಲ್ ಅವರ ಬಳಿಕ ರಾಹುಲ್ ಗಾಂಧಿ ಅವರನ್ನ ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ. ಈ ಸಭೆಯಲ್ಲಿ ಮಾಜಿ ಸಿಎಂ ಸಿದ್ದರಾಮಯ್ಯ ಕೂಡ ಭಾಗಿಯಾಗಿದ್ದಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

2 ದಿನಾಂಕ ಪ್ರಸ್ತಾಪಿಸಿದ ಡಿಕೆಶಿ: ರಾಹುಲ್ ಗಾಂಧಿ ಅವರ ಭೇಟಿ ಬಳಿಕ ಆರಂಭಿಕ ಸುತ್ತಿನ ಮಾತುಕತೆ ನಡೆಸುತ್ತಿರುವ ಡಿಕೆ ಶಿವಕುಮಾರ್ ಅವರು, ಸಂಪುಟ ವಿಸ್ತರಣೆಗೆ ಹೈಕಮಾಂಡ್ ಮುಂದೆ ಎರಡು ದಿನಾಂಕಗಳನ್ನ ಪ್ರಸ್ತಾಪಿಸಿದ್ದಾರೆ. ಜುಲೈ 20ರ ಸೋಮವಾರ ಹಾಗೂ ಜುಲೈ 22 ರ ಬುಧವಾರ ಸಂಪುಟ ವಿಸ್ತರಣೆಗೆ ಶುಭಮುಹೂರ್ತ ಎಂದಿದ್ದಾರೆ. ಇಂದು ಹೈಕಮಾಂಡ್ ಒಪ್ಪಿದ್ರೆ, ಜು.20 ರಂದೇ ಸಂಪುಟ ವಿಸ್ತರಣೆ ಆಗುವ ಸಾಧ್ಯತೆಯಿದ್ದು, ಅಂದೇ ನೂತನ ಸಚಿವರು ಪ್ರಮಾಣ ಸ್ವೀಕರಿಸಲಿದ್ದಾರೆ. ಇನ್ನೂ 2 ಅಥವಾ 3 ಸ್ಥಾನ ಖಾಲಿ ಉಳಿಸಿಕೊಳ್ಳಲು ಕಾಂಗ್ರೆಸ್ ಹೈಕಮಾಂಡ್ ಒಲವು ತೋರಿದೆ, ಆದ್ರೆ ಚುನಾವಣಾ ದೃಷ್ಟಿಯಿಂದ ಪೂರ್ಣ ಪ್ರಮಾಣದ ಸಂಪುಟ ವಿಸ್ತರಣೆಗೆ ಸಿಎಂ ಪ್ರಸ್ತಾಪ ಇಟ್ಟಿದ್ದಾರೆ ಎನ್ನಲಾಗ್ತಿದೆ.

**ಖರ್ಗೆ ವಾಪಸ್ ಆದ ಬಳಿಕ ಮತ್ತೊಮ್ಮೆ ಸಭೆ:** ರಾಹುಲ್ ಗಾಂಧಿ ಸಮ್ಮುಖದಲ್ಲಿ ನಡೆಯುತ್ತಿದ್ದ ಸಭೆ ಅಂತ್ಯಗೊಂಡಿದ್ದು, ಡಿ.ಕೆ ಶಿವಕುಮಾರ್, ಸಿದ್ದರಾಮಯ್ಯ, ಬಿಕೆ ಹರಿಪ್ರಸಾದ್ ಹಾಗೂ ರಣದೀಪ್ ಸುರ್ಜೇವಾಲಾ ಅವರ ಸಮ್ಮುಖದಲ್ಲಿ 2ನೇ ಸುತ್ತಿನ ಚರ್ಚೆ ನಡೆದಿದೆ. ಈ ಮಧ್ಯೆ ಮಲ್ಲಿಕಾರ್ಜುನ ಖರ್ಗೆ ಅವರು ಬೆಂಗಳೂರಿಗೆ ವಾಪಸ್ಸಾದ ಹಿನ್ನೆಲೆ ಸಭೆ ಮುಕ್ತಾಯಗೊಳಿಸಲಾಗಿದೆ. ಅಗತ್ಯ ಬಿದ್ದರೆ ಖರ್ಗೆ ಅವರನ್ನು ವಾಪಸ್ ಕರೆಸಿ ಚರ್ಚಿಸುವುದಾಗಿ ಹೇಳಿರುವ ರಾಗಾ, ಎರಡು ದಿನಗಳ ಮತ್ತೊಮ್ಮೆ ಸಭೆ ಸೇರುವ ಸುಳಿವು ಕೊಟ್ಟಿದ್ದಾರೆ. ಸಿದ್ದರಾಮಯ್ಯ ಸಚಿವ ಸಂಪುಟದಲ್ಲಿದ್ದ 11 ಸಚಿವರನ್ನು ಸಂಪುಟದಲ್ಲಿ ಮುಂದುವರೆಸಲಾಗಿದ್ದು, ಸಿದ್ದರಾಮಯ್ಯ ಸಂಪುಟದಲ್ಲಿದ್ದ ಐದಾರು ಸಚಿವರಿಗಷ್ಟೇ ಮತ್ತೆ ಸಚಿವರಾಗುವ ಭಾಗ್ಯ ಸಿಗಲಿದ್ದು, ಉಳಿದಂತೆ ಹೊಸ ಮುಖಗಳಿಗೆ ಹೆಚ್ಚಿನ ಆದ್ಯತೆ ಸಿಗುವ ಸಾಧ್ಯತೆಗಳು ಹೆಚ್ಚಿವೆ. ಸಚಿವ ಸಂಪುಟದಲ್ಲಿ 20 ಸ್ಥಾನಗಳು ಖಾಲಿಯಿದ್ದು, ಈ ಇಪ್ಪತ್ತು ಸ್ಥಾನಗಳಲ್ಲಿ ಕನಿಷ್ಠ 10 ರಿಂದ 12 ಮಂದಿ ಹೊಸಬರಿಗೆ ಸಚಿವ ಪಟ್ಟ ಸಿಗುವುದು ಬಹುತೇಕ ನಿಶ್ಚಿತ ಎಂದು ಹೇಳಲಾಗಿದೆ. ಖಾಲಿ ಇರುವ 20 ಸ್ಥಾನಗಳಿಗೆ 40ಕ್ಕೂ ಹೆಚ್ಚು ಶಾಸಕರು ಪೈಪೋಟಿ ನಡೆಸಿದ್ದು, ಯಾರನ್ನು ಸಚಿವರನ್ನಾಗಿಸಬೇಕು ಎಂಬುದು ಹೈಕಮಾಂಡ್‌ಗೆ ಸ್ವಲ್ಪಮಟ್ಟಿಗೆ ತಲೆನೋವು ತಂದಿದೆಯಾದರೂ ರಾಹುಲ್‌ಗಾಂಧಿಯವರ ಗಮನಕ್ಕೆ ಎಲ್ಲವನ್ನು ತಂದು ಸಚಿವರ ಪಟ್ಟಿಯನ್ನು ಅಂತಿಮಗೊಳಿಸಲಾಗುತ್ತದೆ. ಪ್ರಾದೇಶಿಕವಾರು, ಜಾತಿವಾರು, ಹಿರಿತನ ಎಲ್ಲವನ್ನು ಗಣನೆಗೆ ತೆಗೆದುಕೊಂಡಿರುವ ಹೈಮಾಕಂಡ್ ಅಳೆದು ತೂಗಿ ಸಚಿವರ ಪಟ್ಟಿಯನ್ನು ಅಂತಿಮಗೊಳಿಸಲಿದ್ದು, ಬಹುತೇಕ ಭಾನುವಾರದ ಹೊತ್ತಿಗೆ ಸಚಿವರ ಪಟ್ಟಿಯನ್ನು ಬಿಡುಗಡೆ ಮಾಡಲಿದೆ. ಸೋಮವಾರ ಇಲ್ಲವೇ ಮಂಗಳವಾರ ನೂತನ ಸಚಿವರ ಪದಗ್ರಹಣ ಕಾರ್ಯಕ್ರಮ ನಡೆಯುವ ಸಾಧ್ಯತೆಗಳು ಹೆಚ್ಚಿವೆ.

**ಖರ್ಗೆ ದಿಢೀರ್ ಬೆಂಗಳೂರಿಗೆ**

ದೆಹಲಿಯಲ್ಲಿ ಇದ್ದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ದಿಢೀರ್ ಅಗಿ ಬೆಂಗಳೂರಿಗೆ ವಾಪಸ್ ಆಗುತ್ತಿದ್ದಾರೆ. ಖಾಸಗಿ ಕಾರಣಕ್ಕಾಗಿ ಅವರು ದೆಹಲಿಯಲ್ಲಿ ಬೆಂಗಳೂರಿಗೆ ವಾಪಸ್ ಆಗಮಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಸದ್ಯ ಸಂಪುಟ ವಿಸ್ತರಣೆ ಮುಂದೂಡಲಾಗಿದೆ ಎಂಬ ಮಾಹಿತಿ ಇದೆ. ಖರ್ಗೆ ಅವರು ಮರಳಿ ದೆಹಲಿಗೆ ತೆರಳಿದ ಬಳಿಕ ಸಂಪುಟ ವಿಸ್ತರಣೆ ಚರ್ಚೆ ನಡೆದು ಅಂತಿಮ ತೀರ್ಮಾನ ಕೈಗೊಳ್ಳುವ ಸಾಧ್ಯತೆ ಇದೆ.



ಪಕ್ಷದ ಬಗ್ಗೆ ಪ್ರಾಮಾಣಿಕತೆ, ನಿಷ್ಠೆ ಮತ್ತು ಬದ್ಧತೆ ಅತ್ಯಂತ ಮುಖ್ಯ. ಸಚಿವ ಸಂಪುಟ ವಿಸ್ತರಣೆಯ ಕುರಿತಾದ ಮಾತುಕತೆಗಳು ದೀರ್ಘಕಾಲದಿಂದ ನಡೆಯುತ್ತಿದ್ದು, ಮುಂದೂಡಲು ಸಾಧ್ಯವಿಲ್ಲ ಎಂದು ತಿಳಿಸಿದರು. ಪಕ್ಷದ ಉನ್ನತ ಮಟ್ಟದಲ್ಲಿ ಈ ಕುರಿತು ನಿರ್ಧಾರ ಕೈಗೊಳ್ಳಲಾಗುವುದು. ವಿಳಂಬವಾಗಿದೆ. ಅವಧಿ ವಿಸ್ತರಣೆಯಾಗದಿರುವ ಸಾಧ್ಯತೆಯೇ ಇಲ್ಲ. ಇದನ್ನು ಆದಷ್ಟು ಶೀಘ್ರವೇ ಮಾಡಲಾಗುವುದು. ಪ್ರಾಮಾಣಿಕತೆ, ನಿಷ್ಠೆ ಮತ್ತು ಪಕ್ಷದ ಬಗೆಗಿನ ಬದ್ಧತೆ ಅತ್ಯಂತ ಮುಖ್ಯ ಎಂದರು.

**ಟಿಬಿ ಜಯಚಂದ್ರ, ಹಿರಿಯ ಕಾಂಗ್ರೆಸ್ ಶಾಸಕ**

**ಲಿಸ್ಟ್ ಜೊತೆ ತೆರಳಿದ ಡಿಕೆ**

ದೆಹಲಿಗೆ ಸಚಿವ ಸಂಪುಟದಲ್ಲಿ ಯಾರೆಲ್ಲಾ ಇರಬೇಕು ಎಂಬ ಲಿಸ್ಟ್ ಜೊತೆಗೆ ಡಿಕೆ ಶಿವಕುಮಾರ್ ತೆರಳಿದ್ದರು.

ಖಾಲಿ ಇರುವ 20 ಸ್ಥಾನಗಳಿಗಾಗಿ 50ಕ್ಕೂ ಹೆಚ್ಚು ಆಕಾಂಕ್ಷಿಗಳಿದ್ದಾರೆ. ಸಂಪುಟ ವಿಸ್ತರಣೆ ಸವಾಲಿನ ಸಂಗತಿಯಾಗಿದೆ. ರಾಜ್ಯದಲ್ಲಿ ಬರ ಪರಿಸ್ಥಿತಿ, ಮಳೆ ಕೊರತೆ ಹಿನ್ನೆಲೆಯಲ್ಲಿ ಸಂಪುಟ ವಿಸ್ತರಣೆಗೆ ಶೀಘ್ರದಲ್ಲಿ ನಡೆಯಬೇಕು ಎಂಬ ಆಗ್ರಹ ಕೇಳಿಬಂದಿದೆ.

## ಜಾತಿ-ಸಮುದಾಯ ಪಕ್ಕಕ್ಕಿಡಿ

ಸಂಪುಟ ವಿಸ್ತರಣೆ ಕುರಿತು ಚರ್ಚೆಗಳು ನಡೆಯುತ್ತಿರುವ ಬೆನ್ನಲ್ಲೇ, ಕಾಂಗ್ರೆಸ್ ನ ಹಲವು ಶಾಸಕರು ಸಚಿವ ಸ್ಥಾನಕ್ಕಾಗಿ ತೀವ್ರ ಲಾಭಿ ನಡೆಸುತ್ತಿದ್ದಾರೆ. ಜಾತಿ ಸಮೀಕರಣಗಳನ್ನು ಮೀರಿ, ಪಕ್ಷದ ಬಗೆಗಿನ ನಿಷ್ಠೆಗೆ ಆದ್ಯತೆ ನೀಡುವಂತೆ ಅವರು ಪಕ್ಷದ ಹೈಕಮಾಂಡ್ ಅನ್ನು ಒತ್ತಾಯಿಸಿದ್ದಾರೆ. ಎಎನ್‌ಐ ಜೊತೆ ಮಾತನಾಡಿದ ಕಾಂಗ್ರೆಸ್ ಶಾಸಕ ಅಶೋಕ್ ಪಟ್ಟಣ್, ಗುರುವಾರ ನಡೆಯಲಿರುವ ಪಕ್ಷದ ಹೈಕಮಾಂಡ್ ಸಭೆಯ ಕುರಿತು ಭರವಸೆ ವ್ಯಕ್ತಪಡಿಸಿದರು. ಜಾತಿ ಸಮೀಕರಣಗಳ ಮೇಲೆ ಅವಲಂಬಿತರಾಗುವ ಬದಲು, ಪಕ್ಷದ ಕಾರ್ಯಕರ್ತರ ತ್ಯಾಗ, ದೀರ್ಘಕಾಲದ ಸೇವೆ ಮತ್ತು ನಿಷ್ಠೆಯನ್ನು ಪರಿಗಣಿಸುವಂತೆ ಹಲವು ನಾಯಕರು ಪಕ್ಷದ ವರಿಷ್ಠರನ್ನು ಒತ್ತಾಯಿಸಿದ್ದಾರೆ ಎಂದು ತಿಳಿಸಿದರು. ಜಾತಿಯನ್ನು ಅವಲಂಬಿಸದಂತೆ ನಾವು ನಮ್ಮ ನಾಯಕರಲ್ಲಿ ಮನವಿ ಮಾಡಿದ್ದೇವೆ. ನಾಯಕರ ತ್ಯಾಗ, ಅವರು ಎಷ್ಟು ವರ್ಷಗಳಿಂದ ಕೆಲಸ ಮಾಡುತ್ತಿದ್ದಾರೆ ಮತ್ತು ಪಕ್ಷದ ಮೇಲಿರುವ ಅವರ ನಿಷ್ಠೆ - ಇವುಗಳನ್ನು ಪರಿಗಣಿಸಬೇಕು; ಇದೇ ಮುಖ್ಯವಾದದ್ದು ಮತ್ತು ನಾವು ಇದರ ಆಧಾರದ ಮೇಲೆ ಪ್ರಸ್ತಾವನೆಯನ್ನು ಸಲ್ಲಿಸಿದ್ದೇವೆ. ನಾನು ಪಕ್ಷಕ್ಕೆ ಶೇ 100 ರಷ್ಟು ನಿಷ್ಠನಾಗಿದ್ದೇನೆ. ಅನಗತ್ಯವಾಗಿ ಜಾತಿ ಮತ್ತು ಉಪಜಾತಿಗಳನ್ನು ಪರಿಗಣಿಸಿದರೆ, ಅದು ನಮಗೆ ಅನ್ಯಾಯವಾಗುತ್ತದೆ. ಅವರು ಜಾತಿಯನ್ನು ಪರಿಗಣಿಸಲಿ, ಆದರೆ ಉಪಜಾತಿ ಅಥವಾ ಕೇವಲ ಜಾತಿಯ ಆಧಾರದ ಮೇಲೆ ಗಮನಹರಿಸಬಾರದು. ಹೌದು, ನಾನು ಸಚಿವರಾಗಲು ಗಂಭೀರ ಪ್ರಯತ್ನ ನಡೆಸುತ್ತಿದ್ದೇನೆ. ಇಂದು ಮಧ್ಯಾಹ್ನ ಪಕ್ಷದ ಹೈಕಮಾಂಡ್ ಜೊತೆ ಸಭೆ ನಡೆಯಲಿದೆ ಎಂದು ನಾನು ಭಾವಿಸುತ್ತೇನೆ' ಎಂದು ಪಟ್ಟನ್ ಹೇಳಿದರು.

## ಸಚಿವ ಸಂಪುಟ ವಿಸ್ತರಣೆಗೆ ಸೋಮವಾರ ಶುಭ ಮುಹೂರ್ತ?



## ನಿರುದ್ಯೋಗಿಗಳಿಗೆ ಕ್ರೀಡಾಪಟುಗಳಿಗೆ ಭರ್ಜರಿ ಗಿಫ್ಟ್: ಕಾಮನ್ ವೆಲ್ತ್ ಗೇಮ್ಸ್ ಕ್ರೀಡಾಪಟುಗಳಿಗೆ ಲಕ್ಷ ಲಕ್ಷ ಪ್ರೋತ್ಸಾಹಧನ

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕದಲ್ಲಿ 72,000 ಸರ್ಕಾರಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ರಾಜ್ಯ ಸರ್ಕಾರ ಆರಂಭಿಸಿದೆ. ಉಪಮುಖ್ಯಮಂತ್ರಿ ಪರಮೇಶ್ವರ್ ಅವರು ಸುದ್ದಿಗೋಷ್ಠಿಯಲ್ಲಿ ಈ ಮಹತ್ವದ ನಿರ್ಧಾರಗಳನ್ನು ಪ್ರಕಟಿಸಿದರು. ಹಣಕಾಸು ಇಲಾಖೆಯ ಅನುಮೋದನೆಯೊಂದಿಗೆ ವಿವಿಧ ಇಲಾಖೆಗಳಿಗೆ ನೇಮಕಾತಿಗಾಗಿ ಅಧಿಸೂಚನೆ ಹೊರಡಿಸಲು ತಿಳಿಸಲಾಗಿದೆ. ಈ ಬೃಹತ್ ನೇಮಕಾತಿಯಲ್ಲಿ ಕ್ರೀಡಾಪಟುಗಳಿಗೆ ವಿಶೇಷ ಆದ್ಯತೆ ನೀಡಲಾಗಿದ್ದು, ಸಾಮಾನ್ಯ ಇಲಾಖೆಗಳಲ್ಲಿ 2% ಮತ್ತು ಪೊಲೀಸ್ ಇಲಾಖೆಯಲ್ಲಿ 3% ಹುದ್ದೆಗಳನ್ನು ಮೀಸಲಿಡಲಾಗಿದೆ.

ಇದರಿಂದ ಸುಮಾರು 2,000 ಹುದ್ದೆಗಳು ರಾಜ್ಯವನ್ನು ಪ್ರತಿನಿಧಿಸುವ ಕ್ರೀಡಾಪಟುಗಳಿಗೆ ದೊರೆಯಲಿವೆ. ಕಳೆದ ಬಾರಿ ಗೃಹ ಸಚಿವರಾಗಿದ್ದಾಗ 180 ಪೊಲೀಸ್ ಸಿಬ್ಬಂದಿ ಮತ್ತು 40 ಸಬ್ ಇನ್ಸ್‌ಪೆಕ್ಟರ್‌ಗಳು ಕ್ರೀಡಾ ಕೋಟಾದಡಿಯಲ್ಲಿ ಆಯ್ಕೆಯಾಗಿದ್ದರು ಎಂದು ತಿಳಿಸಿದರು.

## ಮದ್ಯ ಸೇವನೆಯಲ್ಲಿ ಕರ್ನಾಟಕ ಟಾಪ್; ದೇಶದ ಸರಾಸರಿಯನ್ನೂ ಮೀರಿದ ತಲಾ ಬಳಕೆ

• **ಉದಯವಾಹಿನಿ, ಬೆಂಗಳೂರು**

ದೇಶದಲ್ಲಿ ತಲಾ ಮದ್ಯ ಸೇವನೆ ಪ್ರಮಾಣ ಹೆಚ್ಚಿರುವ ರಾಜ್ಯಗಳ ಪೈಕಿ ಕರ್ನಾಟಕವೂ ಪ್ರಮುಖ ಸ್ಥಾನದಲ್ಲಿದೆ. ರಾಷ್ಟ್ರೀಯ ಕುಟುಂಬ ಆರೋಗ್ಯ ಸಮೀಕ್ಷೆ-5 ಅಂಕಿಅಂಶಗಳ ಪ್ರಕಾರ, ಕರ್ನಾಟಕದಲ್ಲಿ ಒಬ್ಬ ವ್ಯಕ್ತಿ ವರ್ಷಕ್ಕೆ ಸರಾಸರಿ 9.1 ಲೀಟರ್ ಮದ್ಯ ಸೇವಿಸುತ್ತಿದ್ದು, ಇದು ದೇಶದ ಸರಾಸರಿ 6.4 ಲೀಟರ್‌ಗಿಂತ ಗಮನಾರ್ಹವಾಗಿ ಹೆಚ್ಚಾಗಿದೆ.

ಆಸಕ್ತಿಕರ ಸಂಗತಿಯೆಂದರೆ, ರಾಜ್ಯದ ಕೇವಲ ಶೇ.11ರಷ್ಟು ಜನ ಮಾತ್ರ ಮದ್ಯ ಸೇವಿಸುತ್ತಾರೆ. ಆದರೂ, ಮದ್ಯಪಾನ ಮಾಡುವವರು ಹೆಚ್ಚಿನ ಪ್ರಮಾಣದಲ್ಲಿ ಮದ್ಯ ಸೇವಿಸುತ್ತಿರುವುದು ತಜ್ಞರ ಆತಂಕಕ್ಕೆ ಕಾರಣವಾಗಿದೆ. ತಜ್ಞರ ಪ್ರಕಾರ, ದೇಶದ ದಕ್ಷಿಣ ಭಾರತದ ಐದು ರಾಜ್ಯಗಳು ಒಟ್ಟಾಗಿ ದೇಶದ ಒಟ್ಟು ಮದ್ಯ ಮಾರಾಟದ ಶೇ.45ರಷ್ಟು ಪಾಲು ಹೊಂದಿದ್ದು, ಕರ್ನಾಟಕವೂ ಈ ಪಟ್ಟಿಯಲ್ಲಿ ಪ್ರಮುಖ ಸ್ಥಾನದಲ್ಲಿದೆ. ಬೆಂಗಳೂರಿನಲ್ಲಿ ನಿಮ್ಹಾನ್ಸ್ ವತಿಯಿಂದ ಆಯೋಜಿಸಿದ್ದ ಮದ್ಯ ಸೇವನೆಯಿಂದಾಗುವ ಹಾನಿ ಕಡಿಮೆ ಮಾಡುವ ಬಹುಪಾಲುದಾರರ ದೃಷ್ಟಿಕೋನ ಕುರಿತ ರಾಜ್ಯಮಟ್ಟದ ಸಮಾಲೋಚನಾ ಸಭೆಯಲ್ಲಿ ಈ ವಿಷಯ ಪ್ರಮುಖ ಚರ್ಚೆಯಾಯಿತು. ತಜ್ಞರ ಅಭಿಪ್ರಾಯದಂತೆ, ಜನರ ಆದಾಯ ಹೆಚ್ಚಾಗಿರುವುದು, ಜೀವನಶೈಲಿಯಲ್ಲಿನ ಬದಲಾವಣೆ, ನಗರೀಕರಣ, ಖರ್ಚು ಮಾಡುವ ವಿಧಾನದಲ್ಲಿನ ಬದಲಾವಣೆ ಹಾಗೂ ಸಾಮಾಜಿಕವಾಗಿ ಮದ್ಯಪಾನವನ್ನು ಒಪ್ಪಿಕೊಳ್ಳುವ ಮನೋಭಾವ ಹೆಚ್ಚುತ್ತಿರುವುದು ಮದ್ಯ ಸೇವನೆ ಹೆಚ್ಚಲು ಪ್ರಮುಖ ಕಾರಣಗಳಾಗಿವೆ. ಸ್ಥಳೀಯ ಸಮೀಕ್ಷೆಗಳು ಹಾಗೂ ಅಧ್ಯಯನಗಳ ಪ್ರಕಾರ, ನಗರ ಪ್ರದೇಶದ ಯುವಕರು ಹಾಗೂ ದುಡಿಯುವ ವರ್ಗದವರಲ್ಲಿ 18ರಿಂದ 20 ವರ್ಷದೊಳಗಿನ ವಯಸ್ಸಿನಲ್ಲೇ ಮದ್ಯ ಸೇವನೆ ಆರಂಭವಾಗುತ್ತಿದೆ.

## ನೂತನ ಹೈಕೋರ್ಟ್ ನಿರ್ಮಾಣಕ್ಕೆ ಬೆಂಗಳೂರು ಟರ್ಫ್ ಕ್ಲಬ್ ಜಮೀನು ಶೀಘ್ರವೇ ಹಂಚಿಕೆ: ರಾಜ್ಯ ಸರ್ಕಾರ

• **ಉದಯವಾಹಿನಿ, ಬೆಂಗಳೂರು**

ಹೊಸ ಹೈಕೋರ್ಟ್ ಕಟ್ಟಡ ನಿರ್ಮಾಣಕ್ಕಾಗಿ ಬೆಂಗಳೂರು ಟರ್ಫ್ ಕ್ಲಬ್‌ಗೆ ಸೇರಿದ ಜಮೀನನ್ನು ಹಂಚಿಕೆ ಮಾಡುವ ಸಂಬಂಧ ರಾಜ್ಯ ಸರ್ಕಾರ ಶೀಘ್ರದಲ್ಲೇ ನಿರ್ಣಯ ಅಂಗೀಕರಿಸಲಿದೆ ಎಂದು ರಾಜ್ಯ ಸರ್ಕಾರ ಹೈಕೋರ್ಟ್‌ಗೆ ತಿಳಿಸಿದೆ. ಬೆಂಗಳೂರು ನಗರದಲ್ಲಿ ಹೊಸ ಹೈಕೋರ್ಟ್ ಸಂಕೀರ್ಣ ನಿರ್ಮಾಣಕ್ಕೆ 30 ಎಕರೆ ಅಥವಾ ಅದಕ್ಕಿಂತ ಹೆಚ್ಚಿನ ಜಮೀನು ಮಂಜೂರು ಮಾಡುವಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಬೇಕೆಂದು ಶರಣ್ ದೇಸಾಯಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ವೇಳೆ ಅಡ್ವೊಕೇಟ್ ಜನರಲ್ ಶಶಿ ಕಿರಣ್ ಶೆಟ್ಟಿ ಅವರು ಸರ್ಕಾರದ ನಿರ್ಧಾರವನ್ನು ಮೌಖಿಕವಾಗಿ ನ್ಯಾಯಾಲಯಕ್ಕೆ ತಿಳಿಸಿದರು.

ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಮತ್ತು ನ್ಯಾಯಮೂರ್ತಿ ಕೆ.ಎಸ್. ಹೇಮಲೇಖಾ ಅವರಿದ್ದ ವಿಭಾಗೀಯ ಪೀಠ, ಈ ಸಂಬಂಧ ಹೆಚ್ಚಿನ ವಿವರಗಳನ್ನು ದಾಖಲಿಸಲು ಒಂದು ತಿಂಗಳ ಕಾಲಾವಕಾಶ ನೀಡುವಂತೆ ಅಡ್ವೊಕೇಟ್ ಜನರಲ್ ಸಲ್ಲಿಸಿದ ಮನವಿಯನ್ನು ಒಪ್ಪಿಕೊಂಡು, ಪ್ರಕರಣವನ್ನು ಮರುಪಟ್ಟಿಗೆ ಸೇರಿಸಲು ಅನುಮತಿ ನೀಡಿತು. ಈ ಹಿಂದೆ ನಡೆದ ವಿಚಾರಣೆಯಲ್ಲಿ, ಮುಂದಿನ 30ರಿಂದ 50 ವರ್ಷಗಳ ಅಗತ್ಯಗಳನ್ನು ಪೂರೈಸುವಷ್ಟು ಸಾಮರ್ಥ್ಯ ಹೊಂದಿರುವ ಹೊಸ ಹೈಕೋರ್ಟ್ ಸಂಕೀರ್ಣವನ್ನು ನಿರ್ಮಿಸಬೇಕು ಎಂದು ನ್ಯಾಯಪೀಠ ಮೌಖಿಕವಾಗಿ ಅಭಿಪ್ರಾಯ ವ್ಯಕ್ತಪಡಿಸಿತ್ತು.

## ಇನ್ಮುಂದೆ ಪಿಯುಸಿ ಉಪನ್ಯಾಸಕರು 9, 10ನೇ ತರಗತಿಗೆ ಪಾಠ ಮಾಡೋದು ಕಡ್ಡಾಯ

• **ಉದಯವಾಹಿನಿ, ಬೆಂಗಳೂರು**

ಪಿಯುಸಿ ಉಪನ್ಯಾಸಕರು 9, 10ನೇ ತರಗತಿಗೆ ಕಡ್ಡಾಯವಾಗಿ ಪಾಠ ಮಾಡಬೇಕು ಎಂದು ರಾಜ್ಯ ಸರ್ಕಾರ ಅಧಿಸೂಚನೆ ಹೊರಡಿಸಿದೆ. 2013ರ ನೇಮಕಾತಿ ನಿಯಮವನ್ನು ಸರ್ಕಾರ ತಿದ್ದುಪಡಿಗೊಳಿಸಿದ್ದು, ಈ ವರ್ಷದಿಂದಲೇ ನಿಯಮ ಜಾರಿಯಾಗಲಿದೆ. ಇದರನ್ವಯ ನೇರ ನೇಮಕಾತಿ ಮತ್ತು ಬಡ್ತಿಯಿಂದ ನೇಮಕವಾದ ಉಪನ್ಯಾಸಕರು 9-10ನೇ ತರಗತಿಗೆ ಪಾಠ ಮಾಡಬೇಕು ಎಂದು ಸರ್ಕಾರ ಆದೇಶಿಸಿದೆ. ಇನ್ನೂ ರಾಜ್ಯ ಸರ್ಕಾರ 15 ಸಾವಿರ ಶಿಕ್ಷಕರ ನೇಮಕಾತಿ ಪ್ರಕ್ರಿಯೆಯನ್ನು ಆರಂಭಿಸಿದೆ. ನೇಮಕಾತಿ ಸಂಬಂಧ ಸರ್ಕಾರ ಕರಡು ಗೆಜೆಟ್ ಅಧಿಸೂಚನೆ ಪ್ರಕಟಿಸಿದ್ದು, ಆಕ್ಷೇಪಣೆಗೆ 15 ದಿನಗಳ ಅವಕಾಶವನ್ನು ನೀಡಿದೆ. ಕಲ್ಯಾಣ ಕರ್ನಾಟಕಕ್ಕೆ 6905 ಹಾಗೂ ಇತರೆ ಜಿಲ್ಲೆಗಳಿಗೆ 8095 ಹುದ್ದೆ ನೇಮಕಕ್ಕೆ ಅಧಿಸೂಚನೆ ಹೊರಡಿಸಲಾಗಿದೆ.

## ಮಳೆ ಜಾಸ್ತಿ ಆದ್ರೂ, ಕಡಿಮೆ ಆದ್ರೂ ಮೋದಿನೇ ಕಾರಣ ಇದು ಕಾಂಗ್ರೆಸ್ ನೀತಿ: ಜೋಶಿ ಕಿಡಿ

• **ಉದಯವಾಹಿನಿ, ಬೆಂಗಳೂರು**

ಬರದ ವಿಚಾರದಲ್ಲಿ ಸಿಎಂ ಡಿ.ಕೆ ಶಿವಕುಮಾರ್ ರಾಜಕೀಯ ಮಾಡಬಾರದು ಎಂದು ಕೇಂದ್ರ ಸಚಿವ ಜೋಶಿಯವರು ಡಿಕೆಶಿ ವಿರುದ್ಧ ಕಿಡಿಕಾರಿದ್ದಾರೆ. ರಾಜ್ಯದಲ್ಲಿ ಬರ ಅಧ್ಯಯನ ತಂಡ ಕಳಿಸುವಂತೆ ಪ್ರಧಾನಿ ಮೋದಿ ಅವರಿಗೆ ಸಿಎಂ ಪತ್ರ ಬರೆದ ವಿಚಾರಕ್ಕೆ ಅವರು ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು. ಈ ವೇಳೆ, ರಾಜ್ಯ ಸರ್ಕಾರ ಮಳೆ ಎಷ್ಟು ಆಗಿದೆ. ಎಷ್ಟು ಆಗಬೇಕು, ಬಿತ್ತನೆ ಎಷ್ಟು ಆಗಿದೆ ಎಂದು ಕೇಂದ್ರಕ್ಕೆ ಮೊದಲು ಮಾಹಿತಿ ಕೊಡಲಿ. 12 ವರ್ಷಗಳಿಂದ ಕಾಂಗ್ರೆಸ್ ನೀತಿ ಮಳೆ ಜಾಸ್ತಿ ಆದ್ರೆ, ಕಡಿಮೆ ಆದ್ರೆ ಮೋದಿ ಕಾರಣ. ಜನಸಂಖ್ಯೆ ಜಾಸ್ತಿ ಆದ್ರೂ, ಕಡಿಮೆ ಆದ್ರೂ ಮೋದಿ ಕಾರಣ. ಈ ರೀತಿ ಮಾತಾಡೋ ಕೆಲಸ ಕಾಂಗ್ರೆಸ್ ಮಾಡ್ತಿದೆ. ಈ ಧೋರಣೆ ಕೈ ಬಿಡಬೇಕು. ಮೋದಿಗೆ ಕರ್ನಾಟಕದ ಜನ ಮತ ಹಾಕಿದ್ದಾರೆ. ಇಲ್ಲಿನ ಜನ ನಮ್ಮವರೇ. ಇದರಲ್ಲಿ ಬೇಧ ಮಾಡಲ್ಲ. ರಾಜಕೀಯ ಮಾಡೋದು ಬಿಟ್ಟು ಅಂಕಿಗಳನ್ನು ಕೇಂದ್ರ ಸರ್ಕಾರಕ್ಕೆ ಕೊಡಲಿ ಎಂದು ಒತ್ತಾಯಿಸಿದ್ದಾರೆ.

ರಾಜ್ಯದಲ್ಲಿ ಸಚಿವ ಸಂಪುಟ ವಿಸ್ತರಣೆ ವಿಳಂಬ ವಿಚಾರವಾಗಿ, ಕ್ಯಾಬಿನೆಟ್ ಮಾಡೋಕೆ ರಾಹುಲ್ ಗಾಂಧಿ ಇಷ್ಟು ದಿನ ನಾಪತ್ತೆ ಆಗಿದ್ರು. ಅವರು ಎಲ್ಲಿಗೆ ಹೋಗಿದ್ರು ಅಂತ ಯಾರಿಗಾದರು ಗೊತ್ತಾ? ಯಾವ ದೇಶದಲ್ಲಿ ಇದ್ದರು ಎಂದು ನಮಗೂ ಗೊತ್ತಿಲ್ಲ. ರಾಹುಲ್ ಗಾಂಧಿ ಕಳ್ಳತನದಲ್ಲಿ ಯಾಕೆ ವಿದೇಶಕ್ಕೆ ಹೋಗಬೇಕು ಅಂತ ಪ್ರಶ್ನಿಸಿದರು.

ದಾಖಲಾತಿ ತೆಗೆಯೋದು ಕೆಲಸ. ಅವರು ಮಾಡ್ತಾರಾ, ಇಲ್ಲವಾ ನನಗೆ ಗೊತ್ತಿಲ್ಲ. ನಾವು ಅದನ್ನ ಮಾಡಲ್ಲ. ನಾನು ಇಂತಹ ದೇಶಕ್ಕೆ ಹೋಗಿದ್ದೇನೆ ಅಂತ ಹೇಳೋದು ಅವರ ಕೆಲಸ ಅಲ್ಲ. ಪ್ರಧಾನಿ ಕೇಂದ್ರದ ಮಂತ್ರಿಗಳು ವಿದೇಶಕ್ಕೆ ಹೋದಾಗ ಎಲ್ಲಿಗೆ ಹೋಗಿದ್ವಿ ಅಂತ ಹೇಳ್ತಾರೆ. ನೀವು ಯಾಕೆ ಹೇಳಲ್ಲ? 25 ದಿನಗಳಿಂದ ರಾಹುಲ್ ಗಾಂಧಿ ಎಲ್ಲಿದ್ದಾರೆ ಅಂತ ಯಾರಿಗೂ ಗೊತ್ತಿಲ್ಲ. ದೇಶದ ಜನರಿಂದ ಏನು ಮುಚ್ಚಿಡುತ್ತಿದ್ದೀರಾ ಎಂದು ಪ್ರಶ್ನಿಸಿದರು. ಅನೇಕ ಕಾರ್ಯಕ್ರಮ ರದ್ದು





ಮಾಡಿ ಹೋಗಿದ್ದಾರೆ. ಎಲ್ಲಿಗೆ ಹೋಗಿದ್ದಾರೆ? ವಿರೋಧ ಪಕ್ಷದ ನಾಯಕ, ಎಂಪಿ, ಪ್ರತಿಷ್ಠಿತ ಗಾಂಧಿ ಕುಟುಂಬದವರು ಎಲ್ಲಿಗೆ ಹೋಗಿದ್ದೇವೆ ಅಂತ ಹೇಳೋ ಜವಾಬ್ದಾರಿ ಇಲ್ಲವಾ? ಯಾಕೆ ಹೇಳ್ತಿಲ್ಲ ಅಂತ ಅವರೇ ಹೇಳಬೇಕು ಎಂದು ಆಗ್ರಹಿಸಿದರು. ಬಿಡದಿ ಟೌನ್‌ಶಿಪ್‌ಗೆ ಸಿಎಂ ಡಿ.ಕೆ ಶಿವಕುಮಾರ್ ಇಷ್ಟು ಆತುರವಾಗಿ ಮಾಡ್ತಿರೋದು ನೋಡಿದ್ರೆ, ಇದರ ಹಿಂದೆ ಏನೋ ಇದೆ ಎಂದು ಅನುಮಾನ ವ್ಯಕ್ತಪಡಿಸಿದ್ದಾರೆ. 2019ರಿಂದ 2023ರವರೆಗೆ ಬಿಜೆಪಿ ಸರ್ಕಾರ ಇತ್ತು. ಆಗ ನಾವು ಮಾಡಲಿಲ್ಲ. ದೇವೇಗೌಡರು ಸಿಎಂ ಡಿ.ಕೆ ಶಿವಕುಮಾರ್ ಮೇಲೆ ದೊಡ್ಡ ಆರೋಪ ಮಾಡಿದ್ರು. ಅದಕ್ಕೆ ಅವರು ಉತ್ತರ ಕೊಟ್ಟಿಲ್ಲ. ಯಾಕೆ ಉತ್ತರ ಕೊಟ್ಟಿಲ್ಲ. ಸಿದ್ದರಾಮಯ್ಯ ಯಾಕೆ ಇದನ್ನ ಮಾಡಿಲ್ಲ. ಇದನ್ನ ಇಷ್ಟು ಆತುರವಾಗಿ ಮಾಡ್ತಿರೋದು ನೋಡಿದ್ರೆ, ಇದರ ಹಿಂದೆ ಏನೋ ಇದೆ ಅಂತ ಆರೋಪ ಮಾಡಿದರು.

## ಈ ಸರ್ಕಾರ ಕಿತ್ತೊಗೆದು ವಿಧಾನಸೌಧದ 3ನೇ ಮಹಡಿಯಲ್ಲಿ ಬಿಜೆಪಿ ಸರ್ಕಾರ ರಚನೆ ಮಾಡಬೇಕು: ಬೊಮ್ಮಾಯಿ

• **ಉದಯವಾಹಿನಿ, ಬೆಂಗಳೂರು**

ಈ ಸರ್ಕಾರ ಕಿತ್ತೊಗೆದು ವಿಧಾನಸೌಧದ 3ನೇ ಮಹಡಿಯಲ್ಲಿ ಬಿಜೆಪಿ ಸರ್ಕಾರ ರಚನೆ ಮಾಡಬೇಕು: ಬೊಮ್ಮಾಯಿ ಜಿಲ್ಲೆಯಲ್ಲಿ ಡ್ರಗ್ಸ್ ಪೆಡ್ಲರ್‌ಗಳು, ಒಸಿ ಆಡಿಸುವವರು, ಸಾರಾಯಿ ಮಾರುವವರ ಜೊತೆಗೆ ಪೊಲಿಸರ ಪಾರ್ಟ್ನರ್‌ಶಿಪ್ ನಡೆಯುತ್ತಿದೆ. ಗಡಿ ಪಾರಾದವರು, ಗೂಂಡಾ ಲಿಸ್ಟ್‌ನಲ್ಲಿದ್ದವರು ಪೊಲೀಸ್ ಸ್ಟೇಷನ್‌ನಲ್ಲಿ ರಾಜ್ಯಭಾರ ಮಾಡುತ್ತಿದ್ದಾರೆ. ಈ ಸರ್ಕಾರ ಕಿತ್ತೊಗೆದು ವಿಧಾನಸೌಧದ ಮೂರನೇ ಮಹಡಿಯಲ್ಲಿ ಬಿಜೆಪಿ ಸರ್ಕಾರವನ್ನು ರಚನೆ ಮಾಡಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.



ಭಾರತೀಯ ಜನತಾ ಪಾರ್ಟಿಯ ವತಿಯಿಂದ ಏರ್ಪಡಿಸಿದ ಬೃಹತ್ ಪ್ರತಿಭಟನಾ ರ‍್ಯಾಲಿಯಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಹಾವೇರಿ ಜಿಲ್ಲೆ ಸಾಮರಸ್ಯದ ಶಾಂತಿಯ ಬೀಡು, ಸರ್ವಜ್ಞ ಕನಕದಾಸರು, ಶಿಶುನಾಳ ಶರೀಫರ ನಾಡು. ಈ ಜಿಲ್ಲೆಗೆ ಕಾಂಗ್ರೆಸ್ ಶಾಪವಾಗಿ ಬಂದಿದೆ. ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ. ಗಡಿ ಪಾರಾದವರು, ಗೂಂಡಾ ಲಿಸ್ಟ್‌ನಲ್ಲಿದ್ದವರು ಪೊಲೀಸ್ ಸ್ಟೇಷನ್‌ನಲ್ಲಿ ರಾಜ್ಯಭಾರ ಮಾಡುತ್ತಿದ್ದಾರೆ. ಬಹಿರಂಗವಾಗಿ ಇಸ್ಪಿಟ್ ಅಡ್ಡಗಳು ನಡೆಯುತ್ತಿವೆ. ಬೀಡಿ ಅಂಗಡಿಯಲ್ಲಿ ಒಸಿ, ಕಿರಾಣಿ ಅಂಗಡಿಗಳಲ್ಲಿ ಸಾರಾಯಿ ಮುಕ್ತವಾಗಿ ಸಿಗುವಂತಹ ದುಸ್ಥಿತಿ ಜಿಲ್ಲೆಯಲ್ಲಿದೆ ಎಂದು ಆರೋಪಿಸಿದರು. ಹಾವೇರಿ ಜಿಲ್ಲೆಯಲ್ಲಿ ಎಲ್ಲಾ ಕಾಲೇಜುಗಳಲ್ಲಿ ಎಲ್ಲಿ ಹೋದಲ್ಲಿ ಡ್ರಗ್ಸ್ ಇದೆ. ಎಸ್ಪಿ ಆಫೀಸಿಗೆ ಮುತ್ತಿಗೆ ಹಾಕಿದಾಗ ಎರಡು ದಿನ ಸರಿ ಮಾಡುವುದಾಗಿ ಹೇಳಿದರು. ಯಾವುದೇ ಡ್ರಗ್ ಪೆಡ್ಲರ್‌ಗಳನ್ನು ಬಂಧಿಸಿಲ್ಲ. ನಿರಂತರವಾಗಿ ಇಸ್ಪಿಟ್ ಆಡುವವರು, ಡ್ರಗ್ಸ್ ಮಾರುವವರು, ಒಸಿ, ಸಾರಾಯಿ ಮಾರುವವರ ಜೊತೆಗೆ ಪೊಲಿಸರ ಪಾರ್ಟ್ನರ್‌ಶಿಪ್ ನಡೆಯುತ್ತಿದೆ. ಮುಖ್ಯಮಂತ್ರಿಗಳೇ ಏಜೆಂಟ್‌ಗಳಿಗೆ ಯೂನಿಫಾರ್ಮ್ ಕೊಟ್ಟು ಬಿಡಿ. ಪೊಲೀಸ್ ಅಧಿಕಾರಿಗಳನ್ನು ಮನೆಯಲ್ಲಿಯೇ ಕೂರಿಸಿ ಏಜೆಂಟ್‌ಗಳಿಗೆ ಅಧಿಕಾರ ಕೊಡಿ. ಇದೇ ರೀತಿ ಮುಂದುವರೆದರೆ ಹದಿನೈದು ವರ್ಷ ಕಾಂಗ್ರೆಸ್ ಅಧಿಕಾರಕ್ಕೆ ಬರುವುದಿಲ್ಲ ಎಂದು ಕಿಡಿಕಾರಿದರು. ಸವಣೂರು ತಾಲ್ಲೂಕಿನಲ್ಲಿ ಒಬ್ಬ ಶಿಕ್ಷಕರನ್ನು ಬೆತ್ತಲೆ ಮಾಡಿ ಪೊಲೀಸ್ ಸ್ಟೇಷನ್‌ವರೆಗೂ ಹೊಡೆದುಕೊಂಡು ಹೋದರೂ ಯಾರನ್ನೂ ಬಂಧಿಸಲಿಲ್ಲ. ಶಿಗ್ಗಾವಿಯಲ್ಲಿ ಹಗಲು ಹೊತ್ತಿನಲ್ಲೇ ಕೊಲೆ ಮಾಡಿದರೂ, ರಾಜಿ ಮಾಡುವ ಕೆಲಸ ಮಾಡಿದ್ದಾರೆ. ಹಾನಗಲ್‌ನಲ್ಲಿ ಸಾಮೂಹಿಕ ಅತ್ಯಾಚಾರ ಮಾಡಿ ಆರೋಪಿಗಳು ಬೇಲ್ ಮೇಲೆ ಹೊರಗೆ ಬಂದರೆ ಅವರ ಮೆರವಣಿಗೆ ಮಾಡಿದರು. ಹಾನಗಲ್ ತಾಲ್ಲೂಕಿನ ನರೆಗಲ್‌ನಲ್ಲಿ ಕೈ ಕತ್ತರಿಸಿದ್ದಾರೆ. ರಟ್ಟಿಹಳ್ಳಿಯಲ್ಲಿ ಕ್ಷುಲ್ಲಕ ಕಾರಣಕ್ಕಾಗಿ ಶಿವಾಜಿ ಎನ್ನುವವರನ್ನು ಹಾಡಹಗಲೇ ಕೊಲೆ ಮಡಿದ್ದಾರೆ.

## ಬಿಪಿಎಲ್‌ನಲ್ಲಿನ ಅನರ್ಹರನ್ನು ಶೀಘ್ರದಲ್ಲಿ ಎಪಿಎಲ್‌ಗೆ ಸೇರಿಸಿ ಪರಿಷ್ಕರಣೆ: ಸಚಿವ ಕೆ.ಹೆಚ್. ಮುನಿಯಪ್ಪ

• **ಉದಯವಾಹಿನಿ, ಬೆಂಗಳೂರು**

ಹಲವು ಮಂದಿ ಅನರ್ಹರು ಬಿಪಿಎಲ್‌ನಲ್ಲಿ ಇದ್ದಾರೆ. ಅವರನ್ನು ಆದಷ್ಟು ಬೇಗ ಎಪಿಎಲ್‌ಗೆ ಸೇರಿಸಿ ಪರಿಷ್ಕರಣೆ ಮಾಡಲಾಗುವುದು ಎಂದು ಆಹಾರ ಹಾಗೂ ನಾಗರಿಕ ಪೂರೈಕೆ ಸಚಿವ ಕೆ.ಹೆಚ್. ಮುನಿಯಪ್ಪ ಸ್ಪಷ್ಟಪಡಿಸಿದ್ದಾರೆ. ಬಿಪಿಎಲ್‌ನಿಂದ ಎಪಿಎಲ್‌ಗೆ ಪರಿವರ್ತನೆ ಆಗುವಂತೆ ಹಲವು ಬಾರಿ ಮನವಿ ಮಾಡಿದ್ದೇನೆ. ಕೇಂದ್ರ ಸರ್ಕಾರ 7.76 ಲಕ್ಷ ಅನುಮಾನಾಸ್ಪದ ಅನರ್ಹ ಬಿಪಿಎಲ್ ಕಾರ್ಡುಗಳ ಗುರುತು ಮಾಡಿದೆ. ಅದರ ಪರಿಷ್ಕರಣೆ ನಡೆಯುತ್ತಿದ್ದು, ಆದಷ್ಟು ಬೇಗ ಪೂರ್ಣಗೊಳಿಸಲಾಗುವುದು. ಈ ಪೈಕಿ ಈಗಾಗಲೇ ಸುಮಾರು ಶೇ.50ರಷ್ಟು ಪರಿಷ್ಕರಣೆ ಮಾಡಲಾಗಿದೆ. ಸುಮಾರು 4,32,295 ಬಿಪಿಎಲ್‌ನಲ್ಲಿ ಇದ್ದವರನ್ನು ಎಪಿಎಲ್‌ಗೆ ಪರಿವರ್ತನೆ ಮಾಡಲಾಗಿದೆ. ಉಳಿದವರನ್ನು ಆದಷ್ಟು ಬೇಗ ಎಪಿಎಲ್‌ಗೆ ಪರಿವರ್ತನೆ ಮಾಡಲಾಗುವುದು ಎಂದು ತಿಳಿಸಿದ್ದಾರೆ. ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಕೇಂದ್ರ ಸರ್ಕಾರದ 1,08,95,138 ಎಎವೈ, ಪಿಹೆಚ್‌ಹೆಚ್ ಪಡಿತರ ಚೀಟಿಗಳ ಮೂಲಕ 4,02,03,247 ಫಲಾನುಭವಿಗಳು ಹಾಗೂ ರಾಜ್ಯ ಸರ್ಕಾರದ 16,13,266 ಪಿಹೆಚ್ ಹೆಚ್ ಪಡಿತರ ಚೀಟಿಗಳ ಮೂಲಕ 43,48,046 ಫಲಾನುಭವಿಗಳು ಸೇರಿ ಒಟ್ಟಾರೆ 1,25,08,404 ಎಎವೈ/ಪಿಹೆಚ್ ಹೆಚ್ ಪಡಿತರ ಚೀಟಿಗಳ ಮೂಲಕ 4,45,51,293 ಫಲಾನುಭವಿಗಳು ಅನ್ನಭಾಗ್ಯ ಯೋಜನೆಯ ಸೌಲಭ್ಯ ಪಡೆಯುತ್ತಿದ್ದಾರೆ. ರಾಜ್ಯದಲ್ಲಿ ಶೇ.65.69 ಜನಸಂಖ್ಯೆ



ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯ ವ್ಯಾಪ್ತಿಗೆ ಒಳಪಟ್ಟಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ. **ಬಿಪಿಎಲ್ ಆದಾಯ ಮಿತಿ ಹೆಚ್ಚಳಕ್ಕೆ ಕ್ರಮ:** ಬಿಪಿಎಲ್ ಕಾರ್ಡ್‌ಗೆ ಆದಾಯ ಮಿತಿ ಹೆಚ್ಚಳ ವಿಚಾರವಾಗಿ ಮಾತನಾಡಿ, ಆದಷ್ಟು ಬೇಗ ಬಿಪಿಎಲ್ ಕಾರ್ಡ್‌ಗಾಗಿನ ಆದಾಯ ಮಿತಿ ಹೆಚ್ಚಳಕ್ಕೆ ಕ್ರಮ ಕೈಗೊಳ್ಳಲಾಗುವುದು. ಆರ್.ವಿ. ದೇಶಪಾಂಡೆ ಅಧ್ಯಕ್ಷತೆಯ ಆಡಳಿತ ಸುಧಾರಣಾ ಆಯೋಗ ಈ ಬಗ್ಗೆ ಶಿಫಾರಸು ಮಾಡಿದೆ. ಆದಾಯ ಮಿತಿ ಹೆಚ್ಚಿಸುವಂತೆ ಬೇಡಿಕೆ ಇದೆ. ಈ ಬಗ್ಗೆ ಆದಷ್ಟು ಬೇಗ ತೀರ್ಮಾನ ಕೈಗೊಳ್ಳುತ್ತೇವೆ ಎಂದು ಹೇಳಿದರು. ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಅನ್ನಭಾಗ್ಯ ಗ್ಯಾರಂಟಿ ಯೋಜನೆಯಡಿ ಕೇಂದ್ರ ಸರ್ಕಾರದ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ದೊರೆಯುವ 5 ಕೆ.ಜಿ. ಆಹಾರಧಾನ್ಯದ ಜೊತೆಗೆ ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ 5 ಕೆ.ಜಿ. ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುತ್ತಿದೆ. 2023ರಲ್ಲಿ ಕೇಂದ್ರ ಸರ್ಕಾರದಿಂದ ಹೆಚ್ಚುವರಿ ಅಕ್ಕಿ ಲಭ್ಯವಾಗದ ಹಿನ್ನೆಲೆಯಲ್ಲಿ ಜುಲೈ 2023ರಿಂದ ಡಿಸೆಂಬರ್ 2024ರವರೆಗೆ 72.02 ಕೋಟಿ ಫಲಾನುಭವಿಗಳಿಗೆ ಒಟ್ಟು 11,561 ಕೋಟಿ ಮೊತ್ತವನ್ನು ನೇರ ನಗದು ವರ್ಗಾವಣೆ ಮೂಲಕ ಜಮೆ ಮಾಡಲಾಗಿದೆ ಎಂದು ಸಚಿವರು ಇದೇ ವೇಳೆ ವಿವರಿಸಿದರು. ಫೆಬ್ರುವರಿ 2025 ರಿಂದ 4,44,67,942 ಫಲಾನುಭವಿಗಳಿಗೆ ಪ್ರತಿ ತಿಂಗಳು ಹೆಚ್ಚುವರಿಯಾಗಿ 5 ಕೆ.ಜಿ ಅಕ್ಕಿಯನ್ನು ನೇರವಾಗಿ ವಿತರಿಸಲಾಗುತ್ತಿದೆ. ಇದಕ್ಕಾಗಿ ಪ್ರತಿ ತಿಂಗಳು ಸುಮಾರು 2.10 ಲಕ್ಷ ಮೆಟ್ರಿಕ್ ಟನ್ ಅಕ್ಕಿಯನ್ನು ಎಫ್‌ಸಿಐನ ಯೋಜನೆಯಡಿ ಖರೀದಿಸಿ ವಿತರಿಸಲಾಗುತ್ತಿದೆ ಎಂದು ತಿಳಿಸಿದರು. ಆರೋಗ್ಯ ಸಂಬಂಧಿತ ಕಾರಣಕ್ಕೆ ಕೂಡಲೇ ಬಿಪಿಎಲ್ ಕಾರ್ಡ್ ನೀಡಲು ಸೂಚನೆ ನೀಡಲಾಗಿದೆ. 15 ದಿನಗಳಲ್ಲಿ ಕಾರ್ಡ್ ನೀಡಲು ಸೂಚಿಸಲಾಗಿದೆ ಎಂದು ತಿಳಿಸಿದರು. **ಕನಿಷ್ಠ ಬೆಂಬಲ ಬೆಲೆ ಖರೀದಿ:** 2025-26ನೇ ಸಾಲಿನಲ್ಲಿ 5.69 ಲಕ್ಷ ಮೆಟ್ರಿಕ್ ಟನ್ ರಾಗಿ, 2.21 ಲಕ್ಷ ಮೆಟ್ರಿಕ್ ಟನ್ ಜೋಳ ಹಾಗೂ 0.0567 ಲಕ್ಷ ಮೆಟ್ರಿಕ್ ಟನ್ ಭತ್ತವನ್ನು ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಖರೀದಿಸಲಾಗಿದೆ. ಈ ಯೋಜನೆಯ ಒಟ್ಟು ಮೊತ್ತ ರೂ. 4,422.17 ಕೋಟಿ. ಇದರಿಂದ 2,89,350 ರೈತರಿಗೆ ನ್ಯಾಯಯತ ಬೆಲೆ ದೊರೆತಿದೆ. 2026-27ರಲ್ಲಿ ಪ್ರತಿ ಕ್ವಿಂಟಾಲ್ ರಾಗಿಗೆ 5,205 ರೂ. ಕನಿಷ್ಠ ಬೆಂಬಲ ಬೆಲೆ, ಜೋಳಕ್ಕೆ 4,023 ರೂ., ಭತ್ತಕ್ಕೆ 2,461 ರೂ. ಕನಿಷ್ಠ ಬೆಂಬಲ ಬೆಲೆ ನೀಡಲಾಗುತ್ತಿದೆ. ರಾಜ್ಯಕ್ಕೆ ಕೇಂದ್ರ ಸರ್ಕಾರದಿಂದ ಬರಬೇಕಿರುವ 1,902.58 ಕೋಟಿ ಮರುಪಾವತಿಯನ್ನು ಬಿಡುಗಡೆ ಮಾಡುವಂತೆ ಕೇಂದ್ರ ಸರ್ಕಾರವನ್ನು ಕೋರಲಾಗಿದೆ. ಅದರ ಫಲವಾಗಿ ಪ್ರಸಕ್ತ ಹಣಕಾಸು ವರ್ಷದಲ್ಲಿ 190.10 ಕೋಟಿ

### ಸ್ಮಾರ್ಟ್ ಪಿಡಿಎಸ್ ಸುಧಾರಣೆ

**ಸಾರ್ವಜನಿಕ ವಿತರಣಾ ವ್ಯವಸ್ಥೆಯನ್ನು ಇನ್ನಷ್ಟು ಪಾರದರ್ಶಕ ಹಾಗೂ ಪರಿಣಾಮಕಾರಿಯಾಗಿಸಲು ಸ್ಮಾರ್ಟ್ ಪಿಡಿಎಸ್ ಯೋಜನೆ ಜಾರಿಗೊಳಿಸಲಾಗುತ್ತಿದೆ. ಆದಷ್ಟು ಬೇಗ ಯೋಜನೆ ಜಾರಿಗೊಳಿಸಲಾಗುವುದು. ಇದರಡಿ ಇ-ಪಾಸ್ ಯಂತ್ರಗಳು ಹಾಗೂ ಎಲೆಕ್ಟ್ರಾನಿಕ್ ತೂಕ ಯಂತ್ರಗಳ ಅಳವಡಿಕೆಗೆ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದೆ. ಈ ಯೋಜನೆಯಿಂದ ಫಲಾನುಭವಿಗಳಿಗೆ ವೇಗದ, ನಿಖರ ಹಾಗೂ ವಿಶ್ವಾಸಾರ್ಹ ಸೇವೆ ದೊರೆಯಲಿದೆ ಎಂದು ಇದೇ ವೇಳೆ ತಿಳಿಸಿದರು.**

**ಈ ದಿನದ ದರ** ಪೆಟ್ರೋಲ್: 111.37₹/L ಡೀಸೆಲ್ : 99.26₹/L ಬಂಗಾರ: ₹ 14,329/Gram 24ct ₹13,135/Gram 22ct ಬೆಳ್ಳಿ: ₹235.00/Gram

## ಅಮೆರಿಕ ಮಹಿಳೆ ಅತ್ಯಾಚಾರ ಮಾಲೀಕನ ಅಕ್ರಮ ಬಂಧನ ಪ್ರಕರಣ: 5 ಲಕ್ಷ ರೂ. ಪರಿಹಾರಕ್ಕೆ ಹೈಕೋರ್ಟ್ ಆದೇಶ

• ಉದಯವಾಹಿನಿ, ಬೆಂಗಳೂರು

ಕೊಡಗಿನ ಹೋಂಸ್ಟೇವೊಂದರಲ್ಲಿ ಅಮೆರಿಕದ ಪ್ರವಾಸಿ ಮಹಿಳೆಯ ಮೇಲೆ ನಡೆದಿದೆ ಎನ್ನಲಾದ ಅತ್ಯಾಚಾರ ಪ್ರಕರಣ ಸಂಬಂಧ ಹೋಂಸ್ಟೇ ಮಾಲೀಕರನ್ನು ಅಕ್ರಮವಾಗಿ ಬಂಧಿಸಿದ್ದಕ್ಕಾಗಿ ಅವರಿಗೆ 5 ಲಕ್ಷ ರೂ.ಗಳ ಪರಿಹಾರ ನೀಡಬೇಕು ಎಂದು ಹೈಕೋರ್ಟ್ ರಾಜ್ಯ ಸರ್ಕಾರಕ್ಕೆ ಆದೇಶಿಸಿದೆ.

ಪ್ರಕರಣ ಸಂಬಂಧ ತಮ್ಮ ವಿರುದ್ಧ ದಾಖಲಾಗಿರುವ ಎಫ್ಐಆರ್ ರದ್ದು ಕೋರಿ ಹೋಂಸ್ಟೇ ಮಾಲೀಕ ಪಿ.ಪೊನ್ನಪ್ಪ ಸಲ್ಲಿಸಿರುವ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠ ಈ ಆದೇಶ ನೀಡಿದೆ. ಆದರೆ, ಈ ಹಂತದಲ್ಲಿ ಅರ್ಜಿದಾರರ ವಿರುದ್ಧ ಎಫ್ಐಆರ್ ರದ್ದುಗೊಳಿಸಲು ನಿರಾಕರಿಸಿರುವ ನ್ಯಾಯಾಲಯ ತನಿಖೆ ಮುಂದುವರೆಯುವುದು




ಅತ್ಯಗತ್ಯವಾಗಿದೆ ಎಂದು ತಿಳಿಸಿದೆ.ಪ್ರಕರಣ ತನಿಖೆಯ ಹಂತದಲ್ಲಿರುವಾಗ ಹಸ್ತಕ್ಷೇಪದ ಅಗತ್ಯವಿಲ್ಲ. ಹಾಗಾಗಿ ಅಪರಾಧ ಪ್ರಕರಣವನ್ನು ರದ್ದುಗೊಳಿಸುವ ಮನವಿ ಸ್ವೀಕಾರಾರ್ಹವಾಗಿದೆ. ಅರ್ಜಿದಾರರ ಬಂಧನವನ್ನು ಕಾನೂನುಬಾಹಿರ ಎಂದು ಘೋಷಿಸಲಾಗುತ್ತಿದೆ. ಅರ್ಜಿದಾರರು ಅಂತಹ ಅಕ್ರಮ ಬಂಧನಕ್ಕೆ ಪರಿಹಾರವನ್ನು ಪಡೆಯಲು ಅರ್ಹರಾಗುತ್ತಾರೆ. ಕ್ರಿಮಿನಲ್ ಅರ್ಜಿಯನ್ನು ಭಾಗಶಃ ಅನುಮತಿಸಲಾಗಿದೆ. ಅರ್ಜಿದಾರರು 5 ಲಕ್ಷ ರೂ.ಗಳ ಪರಿಹಾರಕ್ಕೆ ಅರ್ಹರಾಗಿದ್ದಾರೆ. ಆದೇಶದ ಪ್ರತಿಯನ್ನು ಸ್ವೀಕರಿಸಿದ 4 ವಾರಗಳಲ್ಲಿ ರಾಜ್ಯ ಸರ್ಕಾರ ಅರ್ಜಿದಾರರಿಗೆ ಪರಿಹಾರವನ್ನು ಪಾವತಿಸಬೇಕು ಎಂದು ಹೈಕೋರ್ಟ್ ಆದೇಶ ನೀಡಿದೆ. ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ನಮ್ಮ ಕಕ್ಷಿದಾರರು ಯಾವುದೇ ಅತ್ಯಾಚಾರವೆಸಗಿಲ್ಲ ಮತ್ತು ಅವರ ವಿರುದ್ಧದ ಆರೋಪಗಳು ಆಧಾರರಹಿತವಾಗಿವೆ. ಎಫ್ಐಆರ್‌ನಲ್ಲಿ ಆರೋಪಿಸದಿದ್ದರೂ ನಂತರದ ಹಂತದಲ್ಲಿ 'ಸಾಮಾನ್ಯ ಉದ್ದೇಶ' ಎಂಬ ಅಂಶವನ್ನು ಸೇರಿಸಿ ಬಂಧಿಸಲಾಗಿದೆ. ಅಲ್ಲದೇ, ಘಟನೆಯ ಸಮಯದಲ್ಲಿ ಅವರು ಹೋಂ ಸ್ಟೇನಲ್ಲಿ ಇರಲಿಲ್ಲ ಎಂಬುದಕ್ಕೆ ಸಿಸಿಟಿವಿ ದೃಶ್ಯಾವಳಿಗಳನ್ನು ಒದಗಿಸಲಾಗುವುದು ಎಂದು ಪೀಠಕ್ಕೆ ತಿಳಿಸಿದರು.

## ಕರ್ನಾಟಕ ಸೇರಿ ವಿವಿಧೆಡೆಗಳ ಎಸ್ಐಆರ್ ಅವಧಿ ವಿಸ್ತರಿಸಿದ ಚುನಾವಣಾ ಆಯೋಗ; ರಾಜ್ಯದಲ್ಲಿ ಆಗಸ್ಟ್ 8ರವರೆಗೆ ಮನೆ-ಮನೆ ಭೇಟಿ

• ಉದಯವಾಹಿನಿ, ಬೆಂಗಳೂರು

ಭಾರತೀಯ ಚುನಾವಣಾ ಆಯೋಗವು ಕರ್ನಾಟಕ ಸೇರಿ ದೆಹಲಿ, ಪಂಜಾಬ್ ಮತ್ತು ತೆಲಂಗಾಣದಲ್ಲಿ ಪ್ರಸ್ತುತ ನಡೆಯುತ್ತಿರುವ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಅವಧಿಯನ್ನು ವಿಸ್ತರಿಸಿ ಆದೇಶ ಹೊರಡಿಸಿದೆ. ಎಸ್ಐಆರ್ ಪ್ರಕ್ರಿಯೆಯನ್ನು ಸುಮಾರು 10-12 ದಿನಗಳವರೆಗೆ ವಿಸ್ತರಿಸಲಾಗಿದೆ. ಈ ರಾಜ್ಯಗಳಲ್ಲಿ 3ನೇ ಹಂತದ ಎಸ್ಐಆರ್ ನಡೆಯುತ್ತಿದೆ. ಜುಲೈ 14ರಂದು ಆಂಧ್ರ ಪ್ರದೇಶ ಮತ್ತು ಹರಿಯಾಣದ ಎಸ್ಐಆರ್ ಅವಧಿಯನ್ನು ವಿಸ್ತರಿಸಲಾಗಿತ್ತು.ರಾಜ್ಯದ ಮುಖ್ಯ ಚುನಾವಣಾ ಅಧಿಕಾರಿಗಳಿಗೆ ಭಾರತೀಯ ಚುನಾವಣಾ ಆಯೋಗದ ಅಧೀನ ಕಾರ್ಯದರ್ಶಿ ಸಂದೀಪ್ ಕುಮಾರ್ ಎಸ್ಐಆರ್ ಚಟುವಟಿಕೆಗಳ ಪರಿಷ್ಕೃತ ವೇಳಾಪಟ್ಟಿಯನ್ನು ಕಳುಹಿಸಿಕೊಟ್ಟಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಕರ್ನಾಟಕದಲ್ಲಿ ಬೂತ್ ಮಟ್ಟದ ಅಧಿಕಾರಿಗಳ ಮನೆ-ಮನೆ ಭೇಟಿ ಪ್ರಕ್ರಿಯೆಯು ಜುಲೈ 29ರ ಬದಲಾಗಿ ಆಗಸ್ಟ್ 8ರವರೆಗೆ ಮುಂದುವರಿಯಲಿದೆ.

ಕರಡು ಮತದಾರರ ಪಟ್ಟಿಯು ಆಗಸ್ಟ್ 5ರ ಬದಲಿಗೆ ಆಗಸ್ಟ್ 17ರಂದು ಪ್ರಕಟವಾಗಲಿದೆ. ಇನ್ನು ಅಂತಿಮ ಮತದಾರರ ಪಟ್ಟಿಯು ಅಕ್ಟೋಬರ್ 7ರ ಬದಲು ಅಕ್ಟೋಬರ್ 19ರಂದು ಹೊರ ಬೀಳಲಿದೆ.

## ಸರ್ವರ್ ಸಮಸ್ಯೆ: ನೋಂದಣಿ ಸ್ಥಗಿತ




• ಉದಯವಾಹಿನಿ, ಬೆಂಗಳೂರು

ಆಸ್ತಿ ವರ್ಗಾವಣೆ, ಮಾರಾಟದಲ್ಲಿ ಪಾರದರ್ಶಕತೆ ತರುವ ಉದ್ದೇಶದಿಂದ ಸಿದ್ಧವಾಗಿ ರುವ ಸಾಫ್ಟ್‌ವೇರ್ ತಂತ್ರಜ್ಞಾನದಿಂದಲೇ ಇದೀಗ ರಾಜ್ಯದ ಜನರಿಗೆ ಸಮಸ್ಯೆಯಾಗಿದೆ. ಸರ್ವರ್ ಸಮಸ್ಯೆ ಯಿಂದ ಖಾತೆ ಕ್ಯಾತೆಯಲ್ಲಿ ಸಾರ್ವಜನಿಕರು ಹೈರಾಣಾಗುತ್ತಿದ್ದಾರೆ. ಖಾತೆ ವರ್ಗಾವಣೆ, ತಿದ್ದುಪಡಿ ಅಥವಾ ಮಾರಾಟ ಮಾಡಿದ ಆಸ್ತಿಯ ಖಾತೆ ವರ್ಗಾವಣೆಯನ್ನು ತಂತ್ರಾಜ್ಞಾನಾಧಾರಿ ತವಾಗಿ ಮಾಡಲಾಗಿದೆ. ಆದರೆ ತಂತ್ರಾಂಶವನ್ನು ಅಪ್ ಡೇಟ್ ಮಾಡಿರುವುದರಿಂದ ಸರ್ವರ್ ಕೈಕೊಡುತ್ತಿರುವ ದೂರು ರಾಜ್ಯಾದ್ಯಂತ ಕೇಳಿಬರುತ್ತಿದೆ.

ಇದರಿಂದಾಗಿ ನೊಂದಣಿ ಪ್ರಕ್ರಿಯೆಯೇ ಸಂಪೂರ್ಣ ನೆಲಕಚ್ಚಿದೆ. ಸರ್ವರ್ ಸಮಸ್ಯೆಯಿಂದ ಇ- ಖಾತೆಯೂ ಸಿಗುತ್ತಿಲ್ಲ. ಇದ ರೊಂದಿಗೆ ತಮ್ಮದೇ ಖಾತೆಯಲ್ಲಿ ಆಗಿರುವ ಲೋಪದೋಷವನ್ನು ಸರಿಪಡಿಸಿಕೊಳ್ಳಲು ಆಗದೇ ತೀವ್ರ ಸಮಸ್ಯೆಯನ್ನು ಸಾರ್ವಜನಿ ಕರು ಅನುಭವಿಸುತ್ತಿದ್ದಾರೆ. ಈ ಬಗ್ಗೆ ಅಧಿಕಾರಿಗಳನ್ನು ಪ್ರಶ್ನಿಸಿದರೆ, ಸರ್ವರ್ ಸಮಸ್ಯೆ ಎನ್ನುವ ಹಾರಿಕೆ ಉತ್ತರ ನೀಡುತ್ತಿದ್ದಾರೆ ಹೊರತು, ತಾಂತ್ರಿಕವಾಗಿ ಆಗುತ್ತಿರುವ ಸಮಸ್ಯೆಗಳೇನು ಎನ್ನುವ ಸ್ಪಷ್ಟನೆಯನ್ನು ನೀಡುತ್ತಿಲ್ಲ.

ಮನೆಯ ಯಜಮಾನಿಯ ನಿಧನ ದಿಂದ ಮನೆಯವರಿಗೆ ವರ್ಗಾವಣೆಯಾಗಿದ್ದ ಖಾತೆಯಲ್ಲಿ ಚಿತ್ರವನ್ನು ಬದಲಾಯಿಸಲು ಸುಮಾರು ಆರು ತಿಂಗಳುಗಳಿಂದ ಪ್ರಯತ್ನಿಸಿದರೂ, ಖಾತೆ ತಿದ್ದುಪಡಿ ಯಾಗಿಲ್ಲ.

## ಎಲ್ಲಿ ಹೋಗುವಿರಿ ನಿಲ್ಲಿ ಮೋಡಗಳೇ...; ಮತ್ತೆ ಮಂಕಾದ ಮುಂಗಾರು: ತಲೆ ಮೇಲೆ ಕೈ ಹೊತ್ತು ಕುಳಿತ ರೈತ




• ಉದಯವಾಹಿನಿ, ಬೆಂಗಳೂರು

ನಿರೀಕ್ಷೆಯಂತೆಯೇ ಎಲ್ ನಿನೋ ಭಾರತದಲ್ಲಿ ಪ್ರಭಾವ ಬೀರ ತೊಡಗಿದೆ. ದೇಶಾದ್ಯಂತ ಮಳೆ ಕೊರತೆ ಎದುರಾಗಿದ್ದು, ರಾಜ್ಯದಲ್ಲೂ ಸುಡು ಬಿಸಿಲಿನ ವಾತಾವರಣ ಕಂಡು ಬರುತ್ತಿದೆ. ರಾಜ್ಯದ ಕೆಲವು ಕಡೆ ಆಗೊಮ್ಮೆ-ಈಗೊಮ್ಮೆ ಮಳೆಯಾಗುವುದು ಬಿಟ್ಟರೆ ಪ್ರತಿ ವರ್ಷದ ಅಬ್ಬರದ ನಳೆ ಕಣ್ಮರೆಯಾಗಿದೆ ಗುರುವಾರ (ಜುಲೈ 16) ಕೂಡ ರಾಜ್ಯದ ಬಹುತೇಕ ಕಡೆ ಒಣ ಹವೆ ಮುಂದುವರಿಯಲಿದ್ದು, 3 ಜಿಲ್ಲೆಗಳಲ್ಲಿ ಮಾತ್ರ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಉತ್ತರ ಕನ್ನಡ, ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಸಾಧಾರಣ ಮಳೆ ಸುರಿಯುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಇನ್ನು ಬೆಂಗಳೂರಿನಲ್ಲಿ ಮುಂದಿನ 24 ಗಂಟೆಗಳ ಕಾಲ ಬೆಂಗಳೂರಿನಲ್ಲಿ ಶುಭ್ರ ಆಕಾಶ ಕಂಡು ಬರಲಿದೆ. ಕೆಲವು ಪ್ರದೇಶಗಳಲ್ಲಿ ಗಂಟೆಗೆ 30-40 ಕಿ.ಮೀ. ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆ ಇದೆ. ಗರಿಷ್ಠ ತಾಪಮಾನ ಸಾಮಾನ್ಯಕ್ಕಿಂತ 3-5 ಡಿಗ್ರಿ ಸೆಲ್ಸಿಯಸ್ ಹೆಚ್ಚಾಗುವ ಸಾಧ್ಯತೆ ಇದೆ. ಕನಿಷ್ಠ ಮತ್ತು ಗರಿಷ್ಠ ಉಷ್ಣಾಂಶ 20ಲಿಅ ಹಾಗೂ 33ಲಿಅ ಇರಲಿದೆ. ಕರಾವಳಿ ಕರ್ನಾಟಕದಾದ್ಯಂತ ಬಿಸಿ ವಾತಾವರಣ ಕಂಡು ಬರಲಿದೆ. ಮುಂದಿನ 5 ದಿನಗಳವರೆಗೆ ರಾಜ್ಯದಲ್ಲಿ ಗರಿಷ್ಟ ತಾಪಮಾನ 5 ಡಿಗ್ರಿ ಸೆಲ್ಸಿಯಸ್ ಅಧಿಕವಾಗಲಿದೆ. ಕರಾವಳಿಯ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಯ ಕೆಲವು ಕಡೆಗಳಲ್ಲಿ 30-40 ಕಿ.ಮೀ. ವೇಗದ ಗಾಳಿಯೊಂದಿಗೆ ಹಗುರದಿಂದ ಸಾಧಾರಣ ಮಳೆಯಾಗಲಿದೆ.

## 100ಕ್ಕೂ ಹೆಚ್ಚು ದೇಶಗಳಿಗೆ ಬಿಎಲ್ಎಸ್ ಇಂಟರ್‌ನ್ಯಾಷನಲ್ ಸೇವೆ ವಿಸ್ತರಣೆ, 2,998 ಕೋಟಿ ಆದಾಯದೊಂದಿಗೆ ಹೊಸ ಮೈಲಿಗಲ್ಲು

• ಉದಯವಾಹಿನಿ, ಬೆಂಗಳೂರು

ಜಾಗತಿಕ ಮಟ್ಟದಲ್ಲಿ ಸರ್ಕಾರಗಳು ಮತ್ತು ನಾಗರಿಕರಿಗೆ ಅತ್ಯಾಧುನಿಕ ತಂತ್ರಜ್ಞಾನ ಮತ್ತು ಎಐ ಆಧಾರಿತ ಸೇವೆಗಳನ್ನು ಒದಗಿಸುವ ಬಿಎಲ್ ಎಸ್ ಇಂಟರ್‌ನ್ಯಾಷನಲ್' ಇದೀಗ ತನ್ನ ಸೇವಾ ಜಾಲವನ್ನು ವಿಶ್ವದ 100ಕ್ಕೂ ಹೆಚ್ಚು ದೇಶಗಳಿಗೆ ವಿಸ್ತರಿಸಿದೆ. ಈ ಮೂಲಕ ಪ್ರಪಂಚದ 46ಕ್ಕೂ ಅಧಿಕ ಸರ್ಕಾರಗಳಿಗೆ ವೀಸಾ, ಕಾನ್ಸುಲರ್ ಮತ್ತು ನಾಗರಿಕ ಸೇವೆಗಳನ್ನು ಯಶಸ್ವಿಯಾಗಿ ಪೂರೈಸುತ್ತಾ ಬಂದಿರುವ ಸಂಸ್ಥೆಯು ಹೊಸ ಶಕೆಯನ್ನು ಆರಂಭಿಸಿದೆ.ಕಳೆದ ಎರಡು ದಶಕಗಳಿಂದ ಈ ವಲಯದಲ್ಲಿ ಸೇವೆ ಸಲ್ಲಿಸುತ್ತಿರುವ ಸಂಸ್ಥೆಯು 100 ದೇಶಗಳ ಗಡಿ ದಾಟಿರುವುದು ಮಹತ್ವದ ಮೈಲಿಗಲ್ಲಾಗಿದೆ.

ಹೊಸ ಮಾರುಕಟ್ಟೆಗಳ ಪ್ರವೇಶ, ವಿವಿಧ ಸರ್ಕಾರ ಗಳೊಂದಿಗಿನ ದೃಢವಾದ ಪಾಲುದಾರಿಕೆ, ಕಾರ್ಯತಂತ್ರದ ಸ್ವಾಧೀನಗಳು ಹಾಗೂ ತಂತ್ರಜ್ಞಾನ ಆಧಾರಿತ ನಾವೀನ್ಯತೆಯೇ ಈ ಬೃಹತ್ ಬೆಳವಣಿಗೆಗೆ ಕಾರಣವಾಗಿದೆ. ಕಾರ್ಯಾಚರಣೆಯ ವಿಸ್ತರಣೆಯ ಜೊತೆಗೆ, 2026ನೇ ಆರ್ಥಿಕ ವರ್ಷದಲ್ಲಿ ಕಂಪನಿಯು ಅತ್ಯುತ್ತಮ ಆರ್ಥಿಕ ಸಾಧನೆ ಮಾಡಿದೆ.

## ಸಹೋದರನ ಪ್ರೀತಿ ನಿರಾಕರಿಸಿದ್ದಕ್ಕೆ ತಮ್ಮನಿಂದ ಕಾನೂನು ವಿದ್ಯಾರ್ಥಿನಿಯ ಹತ್ಯೆ; ಇಬ್ಬರ ಬಂಧನ

• ಉದಯವಾಹಿನಿ, ಬೆಂಗಳೂರು

ಪ್ರೀತಿ ನಿರಾಕರಿಸಿದ್ದಕ್ಕೆ ಸಹೋದರನೊಂದಿಗೆ ಸೇರಿ ಯುವತಿಯನ್ನು ಚಾಕುವಿನಿಂದ ಇರಿದು ಹತ್ಯೆ ಮಾಡಿರುವ ಘಟನೆ ರಾಜಧಾನಿಯ ಜೀವನ್ ಭೀಮಾನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.ಅಮೃತಾ ಹತ್ಯೆಯಾದ ಯುವತಿ. ಈಕೆಯನ್ನು ಹತ್ಯೆ ಮಾಡಿದ ಆರೋಪದಡಿ ಪ್ರಿಯಕರ ಧನುಷ್ ಹಾಗೂ ಆತನ ಸಹೋದರ ಸೂರ್ಯನನ್ನು ಬಂಧಿಸಲಾಗಿದೆ. ಜುಲೈ 13ರಂದು ಘಟನೆ ನಡೆದಿದ್ದು, ಮೂರು ದಿನಗಳ ಕಾಲ ಆಸ್ಪತ್ರೆಯಲ್ಲಿದ್ದ ಅಮೃತಾ, ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದಾಳೆ. ಮರಣೋತ್ತರ ಪರೀಕ್ಷೆಗಾಗಿ ಮೃತದೇಹವನ್ನು ಸಿ.ವಿ.ರಾಮನ್ ಆಸ್ಪತ್ರೆಗೆ ರವಾನಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಹೆಚ್ ಎಎಲ್ ಕೋಡಿಚಿಕ್ಕನಹಳ್ಳಿಯಲ್ಲಿ ಅಮೃತಾ ಕುಟುಂಬ ವಾಸವಾಗಿದ್ದು, ನಾಲ್ಕನೇ ವರ್ಷದ ಕಾನೂನು ಪದವಿ ವ್ಯಾಸಂಗ ಮಾಡುತ್ತಿದ್ದಳು. ಮೂರು ವರ್ಷಗಳ ಹಿಂದೆ ಓಂ ಶಕ್ತಿ ಮಾಲೆ ಹಾಕುವ ವೇಳೆ ಪರಿಚಯವಾಗಿದ್ದ ಧನುಷ್ ಹಾಗೂ ಅಮೃತಾ ಪರಸ್ಪರ ಪ್ರೀತಿಸುತ್ತಿದ್ದರು.

# ಶ್ವಾಸತಾಣ ಉಳಿಸಲು ಹೆಚ್ಎಂಟಿ ಅರಣ್ಯ ಭೂಮಿ ಹಿಂತಿರುಗಿಸಿ: ಸಚಿವ ಈಶ್ವರ ಖಂಡ್ರೆ

## ಕೇಂದ್ರ ಸಚಿವ ಕುಮಾರಸ್ವಾಮಿ ಅವರು ದಾಖಲೆಗಳನು ಇದರ ಪರಿಶೀಲನೆ ಮಾಡಲಿ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರ ಹೆಚ್ಎಂಟಿಗೆ 1961ರಲ್ಲಿ ಬೆಂಗಳೂರು ಪೀಣ್ಯ, ಜಾಲಹಳ್ಳಿ, ಮ್ಯಾಕಲ ಚನ್ನೇನಹಳ್ಳಿಯಲ್ಲಿ ಭೂಸ್ವಾಧೀನ ಮಾಡಿಕೊಟ್ಟಿರುವ ಜಮೀನನ್ನು ಅನ್ಯ ಉದ್ದೇಶಕ್ಕೆ ಬಳಸಿದರೆ, ಮರುವಶಪಡಿಸಿಕೊಳ್ಳಲಾಗುವುದು ಎಂಬ ಷರತ್ತು ಹಾಕಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ನಗರದಲ್ಲಿ ಗುರುವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಈ ಬಗ್ಗೆ 1961 ಸೆಪ್ಟಂಬರ್ 28ರ ಮೈಸೂರು ಗೆಜೆಟ್‌ನಲ್ಲಿ ಸ್ಪಷ್ಟ ಉಲ್ಲೇಖವಿದೆ ಎಂದು ರಾಜ್ಯಪತ್ರದ ಪ್ರತಿ ಪ್ರದರ್ಶಿಸಿದರು. 1913ರ ಭಾರತೀಯ ಕಂಪನಿಗಳ ಕಾಯ್ದೆ ಅಡಿ ನೋಂದಣಿಯಾದ ಹೆಚ್ ಎಂಟಿಗೆ ಅಂದಿನ ಮೈಸೂರು ರಾಜ್ಯ ಸರ್ಕಾರ ಜಾಲಹಳ್ಳಿ, ಪೀಣ್ಯ ಹಾಗೂ ಮ್ಯಾಕಲ ಚನ್ನೇನಹಳ್ಳಿಯಲ್ಲಿ ಭೂಸ್ವಾಧೀನ ಮಾಡಿ ಹಸ್ತಾಂತರಿಸುವಾಗ ಒಪ್ಪಂದವಾಗಿದ್ದು, ಹೆಚ್ಎಂಟಿ ಕೈಗಾರಿಕಾ ಉದ್ದೇಶಕ್ಕೆ ಮಾತ್ರವೇ ಈ ಭೂಮಿ ಬಳಸಬೇಕು, ಷರತ್ತು ಉಲ್ಲಂಘಿಸಿದರೆ ಮರಳಿ ಭೂಮಿಯನ್ನು ಸರ್ಕಾರ ವಶಕ್ಕೆ ಪಡೆಯಬಹುದು ಎಂದಿದೆ. ಪಟ್ಟಾ ಭೂಮಿಗೆ ಈ ಷರತ್ತು ಇರುವಾಗ ಅರಣ್ಯ ಭೂಮಿಗೆ ಇರುವುದಿಲ್ಲವೇ ಎಂದು ಪ್ರಶ್ನಿಸಿದ್ದಾರೆ.

ಮಾಧ್ಯಮಗೋಷ್ಠಿ ನಡೆಸಿದ ಸಂದರ್ಭದಲ್ಲಿ ಹೆಚ್ಎಂಟಿಯಲ್ಲಿ ಇನ್ನೂ ಅರಣ್ಯ ಸ್ವರೂಪ ಇದೆ. ಇಲ್ಲಿನ ಕಟ್ಟಡಗಳಲ್ಲಿ ಸಿನಿಮಾ, ಧಾರಾವಾಹಿ ಶೂಟಿಂಗ್ ನಂತಹ ವಾಣಿಜ್ಯ ಚಟುವಟಿಕೆಗಳು ನಡೆಯುತ್ತಿವೆ. ಕೇಂದ್ರ ಸಚಿವ ಕುಮಾರಸ್ವಾಮಿ ಅವರು ಇದರ ಪರಿಶೀಲನೆ ಮಾಡಲಿ ಎಂದು ತಿಳಿಸಿದ್ದೆ.

ಇಂದು ಅವರು ಸ್ಥಳಕ್ಕೆ ಭೇಟಿ ನೀಡಿದ್ದಾರೆ, ಇದನ್ನು ಸ್ವಾಗತಿಸುತ್ತೇನೆ. ಅವರು ಹಸಿರು ಹೊದಿಕೆ ಪ್ರದೇಶ ನೋಡಿ ಬರಬೇಕು ಎಂದರು. ಕುಮಾರಸ್ವಾಮಿ ಅವರು ರಾಜ್ಯದ ಮಾಜಿ ಮುಖ್ಯಮಂತ್ರಿಗಳೂ ಆಗಿದ್ದಾರೆ. ರಾಜ್ಯದ 7 ಕೋಟಿ ಜನರ ಆಸ್ತಿಯಾದ ಈ ಬೆಲೆಬಾಳುವ ಪ್ರದೇಶವನ್ನು ಬೆಂಗಳೂರು ಉತ್ತರದ ನಿವಾಸಿಗಳಿಗೆ ಉತ್ತಮ ಶ್ವಾಸತಾಣವಾಗಿ ಉಳಿಸಬೇಕು. ಈ ಭೂಮಿಯನ್ನು ಸರ್ಕಾರಕ್ಕೆ ಹಿಂತಿರುಗಿಸಬೇಕು ಎಂದು ತಿಳಿಸಿದ್ದಾರೆ.

**ಹೆಚ್‌ಡಿಕೆ ಹೇಳಿದ್ದೇನು:** ಜುಲೈ 9 ರಂದು ಬೆಂಗಳೂರಲ್ಲಿ ಮಾಧ್ಯಮಗೋಷ್ಠಿ ನಡೆಸಿ ಮಾತನಾಡಿದ್ದ ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಹೆಚ್ಎಂಟಿ ಜಾಗಕ್ಕೂ ಅರಣ್ಯ ಇಲಾಖೆಗೂ ಯಾವುದೇ ಸಂಬಂಧ ಇಲ್ಲ. ಆ ಜಮೀನನ ಮೇಲೆ ಅರಣ್ಯ ಇಲಾಖೆಗೆ ಯಾವುದೇ ರೀತಿಯ ಹಕ್ಕು ಇರುವುದಿಲ್ಲ. ಬೇಕಿದ್ದರೆ ಈ ಬಗ್ಗೆ ಮಾತನಾಡುತ್ತಿರುವವರು ದಾಖಲೆಗಳನ್ನು ಪರಿಶೀಲನೆ ಮಾಡಲಿ ಎಂದು ಹೇಳಿದ್ದರು.

1960ರಲ್ಲೇ ಕಾನೂನುಬದ್ಧವಾಗಿ ಡೀಫಾರೆಸ್ಟ್ ಮಾಡಿ, ಡಿಎಫ್ಒ ಅವರಿಂದ ನಿರಾಪೇಕ್ಷಣ ಪತ್ರ ಪಡೆದು ಹೆಚ್ಎಂಟಿಗೆ ನೀಡಲಾದ ಭೂಮಿಯನ್ನು ಒತ್ತುವರಿ ಎಂದು ಬಿಂಬಿಸುತ್ತಿರುವ ಈಶ್ವರ್ ಖಂಡ್ರೆ ಅವರ



ವರ್ತನೆ ಸರಿಯಲ್ಲ ಎಂದು ಹೆಚ್ ಡಿಕೆ ತಿಳಿಸಿದ್ದರು. 1960ರ ನವೆಂಬರ್ 25ರ ಹೆಚ್ಎಂಟಿ ಸಂಸ್ಥೆಯ ಒಪ್ಪಂದ ಕುರಿತಂತೆ ಅಧಿಕೃತ ಸರ್ಕಾರಿ ಆದೇಶದ ದಾಖಲೆಗಳನ್ನೇ ಅವರು ಬಿಡುಗಡೆ ಮಾಡಿದ್ದರು. ಆರೋಪ ಮಾಡುವ ಮುನ್ನ ದಾಖಲೆ ಕೊಟ್ಟು ಮಾತನಾಡಿ ಖಂಡ್ರೆಯವರೇ ಎಂದು ಅವರು ಸವಾಲು ಹಾಕಿದ್ದರು.

### ಗ್ರಾಮ ಪಂಚಾಯಿತಿಗಳಿಗೆ ಬಾಕಿ 2,186 ಕೋಟಿ ರೂ ಬಿಡುಗಡೆಗೆ ಒತ್ತಾಯ

ಗ್ರಾಮೀಣಾಭಿವೃದ್ಧಿ ಕಾಮಗಾರಿಗಳಿಗೆ ಅಗತ್ಯವಾಗಿರುವ 15ನೇ ಹಣಕಾಸು ಆಯೋಗದ ಅನುದಾನದಡಿ ಕರ್ನಾಟಕದ ಗ್ರಾಮ ಪಂಚಾಯಿತಿಗಳಿಗೆ ಬಾಕಿ ಇರುವ 2,186.20 ಕೋಟಿ ರೂ ಅನುದಾನವನ್ನು ತಕ್ಷಣ ಬಿಡುಗಡೆಗೊಳಿಸುವಂತೆ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಖಂಡ್ರೆ ಅವರು ರಾಜ್ಯದ ಎಲ್ಲಾ ಸಂಸದರಿಗೆ ಪತ್ರ ಬರೆದು ಮನವಿ ಮಾಡಿದ್ದಾರೆ.

2025-26ನೇ ಹಣಕಾಸು ವರ್ಷದ ಅನುದಾನವನ್ನು ಕೇಂದ್ರ ಸರ್ಕಾರ ಇನ್ನೂ ಬಿಡುಗಡೆ ಮಾಡದಿರುವುದರಿಂದ ಗ್ರಾಮೀಣಾಭಿವೃದ್ಧಿ ಕಾಮಗಾರಿಗಳಿಗೆ ತೀವ್ರ ಹಿನ್ನಡೆಯಾಗಿದೆ.

### ವೀರಶೈವ ಲಿಂಗಾಯತರು ವಿಶಾಲ ಹೃದಯಿಗಳು




ಇವನಾರವ ಎನ್ನದೆ, ಇವ ನಮ್ಮವ ಎಂದು ಎಲ್ಲರನ್ನೂ ಅಪ್ಪಿಕೊಂಡು, ಒಪ್ಪಿಕೊಂಡ ವಿಶಾಲಹೃದಯಿಗಳು ವೀರಶೈವ ಲಿಂಗಾಯತರು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ಪ್ರತಿಪಾದಿಸಿದರು. ನಗರದ ಸುಜ್ಞಾನ ಮಂದಿರಲ್ಲಿ ಬಾಳೆಹೊನ್ನೂರು ರಂಭಾಪುರಿ ಪೀಠದ ಪ್ರಸನ್ನ ರೇಣುಕ ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಸ್ವಾಮೀಜಿಯವರ 24ನೇ ವರ್ಷದ ಇಷ್ಟಲಿಂಗ ಮಹಾಪೂಜೆ ಮತ್ತು ಜನಜಾಗೃತಿ ಧರ್ಮ ಸಮಾರಂಭದಲ್ಲಿ ಮಾತನಾಡಿ, 'ಸಮಾಜ ಕವಲು ದಾರಿಯಲ್ಲಿದ್ದು, ಕೆಲವರು ಸ್ವಾರ್ಥಕ್ಕಾಗಿ ಧರ್ಮ, ಜಾತಿಗಳ ನಡುವೆ ವೈಮನಸ್ಯ ಹುಟ್ಟು ಹಾಕುತ್ತಿದ್ದಾರೆ' ಎಂದು ಬೇಸರ ವ್ಯಕ್ತಪಡಿಸಿದರು.

ವೀರಶೈವ -ಲಿಂಗಾಯತರನ್ನು ಒಡೆಯಲು ಪ್ರಯತ್ನಿಸುವವರ ಬಗ್ಗೆ ಜಾಗೃತರಾಗಿರಬೇಕು. ಒಗ್ಗಟ್ಟಿನಲ್ಲಿ ಬಲವಿದೆ, ವಿಘಟನೆಯಲ್ಲಿ ದೌರ್ಬಲ್ಯವಿದೆ ಎಂಬುದನ್ನು ತಿಳಿಯಬೇಕು. ಪಂಚಪೀಠಗಳ ಮಠಾಧಿಪತಿಗಳ ಆಶೀರ್ವಾದದ ಬಲ ಸಮಾಜದ ಮೇಲಿದ್ದು, ಯಾವುದೇ ಶಕ್ತಿಯು ಸಮುದಾಯವನ್ನು ಬೇರೆ ಮಾಡಲು ಸಾಧ್ಯವಿಲ್ಲ' ಎಂದು ವೀರಶೈವ ಲಿಂಗಾಯತ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷರೂ ಆದ ಈಶ್ವರ ಬಿ. ಖಂಡ್ರೆ ಹೇಳಿದರು.

ವೀರಶೈವ, ಶರಣ ಪರಂಪರೆಯ ಮಹತ್ವವನ್ನು, ಸಮುದಾಯದ ಸಾಧಕರ ಕಥೆಗಳನ್ನು ಮಕ್ಕಳಿಗೆ ತಿಳಿಸಬೇಕು. ಸಮುದಾಯದ ಬಡವರಿಗೆ ನೆರವಾಗಬೇಕು' ಎಂದರು. ವೀರ ಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರು. ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮೀಜಿ, ಸಿದ್ದರಬೆಟ್ಟದ ವೀರಭದ್ರ ಶಿವಾಚಾರ್ಯ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಮುಖಂಡ ಬಿ.ಎಸ್.ಪರಮಶಿವಯ್ಯ, ಆರ್.ಆರ್ ಹಿರೇಮಠ, ಗುರುಸ್ವಾಮಿ ಉಪಸ್ಥಿತರಿದ್ದರು.

### ಸವಾಲು ಸ್ವೀಕರಿಸಿದ್ದ ಸಚಿವ ಖಂಡ್ರೆ

ಕುಮಾರಸ್ವಾಮಿ ಅವರು ಮಾಧ್ಯಮಗೋಷ್ಠಿ ನಡೆಸಿದ ಎರಡು ದಿನಗಳ ಬಳಿಕ ಸಚಿವ ಖಂಡ್ರೆ ಪ್ರತಿಕ್ರಿಯಿಸಿ, ಅರಣ್ಯೇತರ ಉದ್ದೇಶಕ್ಕೆ ಭೂ ಪರಿವರ್ತನೆ ಆಗದ ಹೆಚ್ಎಂಟಿ ಭೂಮಿ ಅರಣ್ಯವಾಗಿದ್ದು, ಅರಣ್ಯವಾಗಿಯೇ ಉಳಿಯುತ್ತದೆ. ಇದರ ಮೇಲೆ ರಾಜ್ಯ ಸರ್ಕಾರಕ್ಕೆ ಹಕ್ಕಿದೆಯೇ ಹೊರತು, ಹೆಚ್ ಎಂಟಿಗಲ್ಲ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಬಿ. ಖಂಡ್ರೆ ಸ್ಪಷ್ಟಪಡಿಸಿದ್ದರು. ನಾನು ಅಭಿವೃದ್ಧಿಯಲ್ಲಿ ರಾಜಕೀಯ ಮಾಡುವವನೂ ಅಲ್ಲ, ಕುಮಾರಸ್ವಾಮಿ ಅವರ ಮೇಲೆ ನನಗೆ ಯಾವುದೇ ವೈಯಕ್ತಿಕ ದ್ವೇಷವೂ ಇಲ್ಲ. ಆದರೆ ಹೆಚ್ಎಂಟಿ ಅರಣ್ಯ ಭೂಮಿಯನ್ನು ರಾಜ್ಯ ಸರ್ಕಾರಕ್ಕೆ ಮರಳಿ ಪಡೆದು, ಅಲ್ಲಿ ಲಾಲ್ ಬಾಗ್, ಕಬ್ಬನ್ ಪಾರ್ಕ್ ಗಿಂತ ದೊಡ್ಡ ಉದ್ಯಾನ ನಿರ್ಮಿಸಿ ಬೆಂಗಳೂರಿಗರಿಗೆ ಅತ್ಯಗತ್ಯವಾದ ಶ್ವಾಸತಾಣ ಉಳಿಸಲು ನಿರ್ಧರಿಸಿದ್ದ ನಾನು ಪರಿಸರ ಆಸಕ್ತನಾಗಿ ಕುಮಾರಸ್ವಾಮಿ ಅವರ ಆರೋಪಕ್ಕೆ ಉತ್ತರ ಕೊಡುತ್ತಿದ್ದೇನೆ'' ಎಂದು ಹೇಳಿದ್ದರು.

## ಸಚಿವ ಸತೀಶ್ ಜಾರಕಿಹೊಳಿ ಸಂಬಂಧಿಕರ ಮೇಲೆ ED ದಾಳಿ: ಬಲವಂತದ ಕ್ರಮ ಕೈಗೊಳ್ಳದಂತೆ ಹೈಕೋರ್ಟ್ ಸೂಚನೆ

• ಉದಯವಾಹಿನಿ, ಬೆಂಗಳೂರು

ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಸಂಬಂಧಿ ಅಬಕಾರಿ ಇಲಾಖೆಯ ಹೆಚ್ಚುವರಿ ಆಯುಕ್ತ ಡಾ.ವೈ.ಮಂಜುನಾಥ್ ಸೇರಿ ಇತರರ ವಿರುದ್ಧ ಅಕ್ರಮ ಹಣ ವರ್ಗಾವಣೆ ಕಾಯಿದೆ (ಪಿಎಂಎಲ್ಎ) ಅಡಿ ಶೋಧ ಮತ್ತು ಜಪ್ತಿ ಸಂಬಂಧಿತ ಪ್ರಕ್ರಿಯೆ ಕುರಿತಂತೆ ಬಲವಂತದ ಕ್ರಮ ಕೈಗೊಳ್ಳದಂತೆ ಜಾರಿ ನಿರ್ದೇಶನಾಲಯ(ಇ.ಡಿ)ಕ್ಕೆ ಹೈಕೋರ್ಟ್ ನಿರ್ದೇಶನ ನೀಡಿದೆ.

ಜೂನ್ 23ರಂದು ಬೆಂಗಳೂರು ಮತ್ತು ಗೋವಾದ ಇ.ಡಿ ಅಧಿಕಾರಿಗಳು ಬೆಳಗಾವಿ ಸೇರಿದಂತೆ ಅರ್ಜಿದಾರರಿಗೆ ಸೇರಿದ ವಿವಿಧ ಸ್ಥಳಗಳಲ್ಲಿ ನಡೆಸಿರುವ ಶೋಧ ಮತ್ತು ಜಪ್ತಿ ಪ್ರಶ್ನಿಸಿ ಡಾ.ಮಂಜುನಾಥ್ ಮತ್ತು ಅವರ ಸಂಬಂಧಿಗಳು ಪ್ರತ್ಯೇಕವಾಗಿ ಸಲ್ಲಿಸಿರುವ ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠ ಈ ಆದೇಶ ನೀಡಿದೆ.

ಅಲ್ಲದೇ, ಇ.ಡಿ ಭ್ರಷ್ಟಾಚಾರದ ವಿರುದ್ಧ ಸಮರ ಸೇನಾನಿಯಾಗಿರಬಹುದು. ಆದರೆ, ಕಾನೂನಿನ ಅನ್ವಯ ನಡೆಯಬೇಕು. ಯಾವುದೇ ಇಲಾಖೆಯಲ್ಲಿ ಭ್ರಷ್ಟಾಚಾರ ನಿರ್ಮೂಲನೆ ಮಾಡುವ ಉತ್ಸಾಹ ಇದ್ದರೆ ಕಾನೂನಿನ ಪ್ರಕಾರ ಕ್ರಮಕ್ಕೆ ಮುಂದಾಗಬೇಕು. ಆಗ ಯಾವುದೇ ನ್ಯಾಯಾಲಯ ಮಧ್ಯಪ್ರವೇಶ ಮಾಡುವುದಿಲ್ಲ ಎಂದು ಪೀಠ ತಿಳಿಸಿತು.

ಮುಂದುವರೆದು, ಜಾರಿ ನಿರ್ದೇಶನಾಲಯವು ಹಾಲಿ ಪ್ರಕರಣದಲ್ಲಿ ಮುಂದಿನ ವಿಚಾರಣೆಯವರೆಗೆ ಮುಂದುವರೆಯಬಾರದು ಎಂದು ನಿರ್ದೇಶಿಸಿದ್ದು, ವಿಚಾರಣೆಯನ್ನು ಜುಲೈ 22ಕ್ಕೆ ಮುಂದೂಡಿದೆ. ಇದಕ್ಕೂ ಮುನ್ನ ನಡೆದ ವಿಚಾರಣೆಯ ವೇಳೆ, ಹಣ ವರ್ಗಾವಣೆಯಾಗಿರಬೇಕು, ಸಂಪರ್ಕ ಕಾಣಬೇಕು.

ಇಲ್ಲಿ ಸಂಬಂಧವೇ ಇಲ್ಲದ ವ್ಯಕ್ತಿಗಳಿದ್ದಾರೆ. ಅಷ್ಟು ಸರಳವಾಗಿ




ನೀವು ಅವರನ್ನು ಸಿಲುಕಿಸಲಾಗದು. ಯಾರ ಮನೆಯನ್ನಾದರೂ ಇ.ಡಿ ಶೋಧಿಸಬಹುದು. ಸಂಬಂಧಿಸಿದಂತೆ ಅಪರಾಧದ ಪೂರ್ವಾಪರ ಇರಬೇಕು. ಆ ಪ್ರಕರಣದಲ್ಲಿ ವ್ಯಕ್ತಿ ಆರೋಪಿಯಾಗಿರಬೇಕು.

ಇಲ್ಲವೇ ಆ ವ್ಯಕ್ತಿಯನ್ನು ಸಂಪರ್ಕಿಸುವ ಹಣ ವರ್ಗಾವಣೆಯಾಗಿರಬೇಕು ಎಂದು ತಿಳಿಸಿದ ಪೀಠ, ಪ್ರಕರಣದಲ್ಲಿರುವ ವ್ಯಕ್ತಿಗಳು ಯಾರು? ಅವರಿಗೂ, ಪ್ರಕರಣಕ್ಕೂ ಏನು ಸಂಬಂಧ ಎಂದು ಪ್ರಶ್ನಿಸಿತು. 25 ಲಕ್ಷ ರೂಪಾಯಿಗಳನ್ನು ಲಂಚ ಪಡೆಯುವ ಸಂದರ್ಭದಲ್ಲಿ ಸಿಕ್ಕಿಬಿದ್ದಿರುವುದು ಅಪರಾಧ ಪ್ರಕ್ರಿಯೆಯಾಗುತ್ತದೆಯೇ? ಲಂಚ ಪಡೆದ ವ್ಯಕ್ತಿಯ ವಿರುದ್ಧ ಇ.ಡಿ ಮುಂದುವರೆಯಬಹುದು. ಇದಕ್ಕೆ ಸಂಬಂಧವೇ ಇಲ್ಲದ ವ್ಯಕ್ತಿಗಳ ವಿರುದ್ಧ ಹೇಗೆ ಇ.ಡಿ ವಿಚಾರಣೆ ನಡೆಸಬಹುದು? ಎಂದು ಮರುಪ್ರಶ್ನೆ ಮಾಡಿತು. ಅರ್ಜಿದಾರರ ಪರ ವಕೀಲರು, ಈ ಪ್ರಕರಣದಲ್ಲಿ ಅಪರಾಧದ ಪೂರ್ವಪರವಾಗಿ ಏನೂ ಇಲ್ಲ. ಜಾರಿ ನಿರ್ದೇಶನಾಲಯದ ಪತ್ರಿಕಾ ಪ್ರಕಟಣೆಯು ಪಿಎಂಎಲ್ಎ ಅಡಿ ವ್ಯಾಪ್ತಿಗೆ ಒಳಪಡುವುದಿಲ್ಲ. ಅರ್ಜಿದಾರರ ಕಚೇರಿ ಮತ್ತು ಮನೆಗಳಲ್ಲಿ ಶೋಧ ಮತ್ತು ಜಪ್ತಿ ನಡೆದಿದೆ. ಅವರ ವಿರುದ್ಧ ಬಲವಂತದ ಕ್ರಮ ಕೈಗೊಳ್ಳದಂತೆ ನಿರ್ಬಂಧಿಸಬೇಕು ಎಂದು ಕೋರಿದರು. ಜಾರಿ ನಿರ್ದೇಶನಾಲಯದ ಪರ ವಕೀಲರು, ತನಿಖೆಯ ಸಂದರ್ಭದಲ್ಲಿ ಪತ್ತೆಯಾದ ಅಂಶಗಳ ಆಧಾರದಲ್ಲಿ ಇ.ಡಿ ಕ್ರಮ ಕೈಗೊಂಡಿದೆ. ಈ ಸಂಬಂಧಮಾಹಿತಿ ಪಡೆಯಲು ಕಾಲಾವಕಾಶ ನೀಡಬೇಕು ಎಂದು ಕೋರಿದರು.

## ಎಸ್ಐಆರ್ ಬಗ್ಗೆ ಮತದಾರರಿಗೆ ಇನ್ನಷ್ಟು ಮಾಹಿತಿ ನೀಡಲು ಪ್ರತಿ ಶನಿವಾರ ಹಾಗೂ ಭಾನುವಾರ ವಿಶೇಷ ಶಿಬಿರ: ಅನ್ಬುಕುಮಾರ್

• ಉದಯವಾಹಿನಿ, ಬೆಂಗಳೂರು

ಮತದಾರರಿಗೆ ಹೆಚ್ಚಿನ ಮಾಹಿತಿ ನೀಡಲು ಹಾಗೂ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆಯಲ್ಲಿ (ಎಸ್ಐಆರ್) ಭಾಗಿಯಾಗಿಸಲು ಪ್ರತಿ ಶನಿವಾರ ಹಾಗೂ ಭಾನುವಾರ ವಿಶೇಷ ಶಿಬಿರ ಹಮ್ಮಿಕೊಳ್ಳುವಂತೆ ಸೂಚಿಸಲಾಗಿದೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ತಿಳಿಸಿದ್ದಾರೆ.

ಚುನಾವಣಾ ಆಯೋಗದ ಕಚೇರಿಯಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯದಲ್ಲಿ ಎಸ್ಐಆರ್ ಜಾರಿಯಲ್ಲಿದ್ದು, ಈಗಾಗಲೇ 95ರಷ್ಟು ಗಣತಿ ನಮೂನೆ (ಇನ್ಯೂಮರೇಷನ್ ಅರ್ಜಿ) ಕೊಡಲಾಗಿದೆ. ಅರ್ಜಿ ತುಂಬುವುದು ಹೇಗೆ 2002ರ ಎಸ್ಐಆರ್ ಪಟ್ಟಿಯಲ್ಲಿ ಹೆಸರು ಹುಡುಕುವುದು ಹೇಗೆ ಕ್ಷೇತ್ರ ಬದಲಾವಣೆಯಿಂದಾಗಿ ಬಿಎಲ್ಒಗಳ ಸಂಪರ್ಕ ಮಾಡುವುದು ಸೇರಿದಂತೆ ಹಲವು ರೀತಿಯ ಸಮಸ್ಯೆಗಳು ನಾಗರಿಕರು ಎದುರಿಸುತ್ತಿದ್ದಾರೆ. ನೀಡಿ ಅವರಲ್ಲಿರುವ ಅನುಮಾನಗಳನ್ನ ಅರ್ಜಿ ತುಂಬುವಂತೆ ಮಾಡಲು ಪ್ರತಿ ಶನಿವಾರ ಹಾಗೂ ಭಾನುವಾರ ವಿಶೇಷ ಶಿಬಿರ ಹಮ್ಮಿಕೊಳ್ಳಲು ಸೂಚಿಸಲಾಗಿದೆ.

ನಗರದ ಪ್ರದೇಶಗಳಲ್ಲಿ ಕೆಲಸದೊತ್ತಡದಿಂದಾಗಿ ಮತದಾರರು ಗಣತಿ ನಮೂನೆ ಪಡೆಯಲು ಆಗುತ್ತಿಲ್ಲ. ಒಂದು ವೇಳೆ ಅರ್ಜಿ ಪಡೆದರೂ ಬೇಕಿರುವ ಅಗತ್ಯ ಮಾಹಿತಿ ಕೊರತೆಯಿಂದಾಗಿ ಅರ್ಜಿ ತುಂಬಲು ಹಿಂದೇಟು ಹಾಕುತ್ತಿದ್ದಾರೆ. ಇದೇ ರೀತಿ ರಾಜ್ಯದ ತಾಂಡಾ ಸೇರಿದಂತೆ ಕೆಲ ಹಳ್ಳಿಗಳಲ್ಲಿಯೂ ಇದೇ ರೀತಿ ಸಮಸ್ಯೆಯಿದೆ. ವಿಶೇಷ ಶಿಬಿರ ಹಮ್ಮಿಕೊಳ್ಳುವಂತೆ ತಿಳಿಸಲಾಗಿದೆ. ಅಂತಿಮವಾಗಿ ಅಯಾ ಜಿಲ್ಲಾಧಿಕಾರಿಗಳು ವಿವೇಚನೆ ಬಳಸಿ ವಿಶೇಷ ಶಿಬಿರ ಹಮ್ಮಿಕೊಳ್ಳಲಿದ್ದಾರೆ ಎಂದರು.

2002ರಲ್ಲಿ ಎಸ್ಐಆರ್‌ನಲ್ಲಿ ಮತದಾರರ ಪಟ್ಟಿಯಲ್ಲಿ ಹೆಸರಿಲ್ಲದಿದ್ದರೂ ಗಣತಿ ನಮೂನೆಯಲ್ಲಿ ಸಹಿ ಮಾಡಿ ಬಿಎಲ್ ಒಗಳಿಗೆ ನೀಡಿದರೆ ಆಗಸ್ಟ್ 5ರಂದು ಮತದಾರರ ಕರಡು ಪಟ್ಟಿಯಲ್ಲಿ ನಿಮ್ಮ ಹೆಸರು ಬರಲಿದೆ.

## ಸುಪ್ರೀಂಕೋರ್ಟ್‌ನಲ್ಲಿ ಭಾರೀ ಹಿನ್ನಡೆ: ಉಪಸಭಾಪತಿ ಎಂ.ಕೆ ಪ್ರಾಣೇಶ್ ಪರಿಷತ್ ಸದಸ್ಯತ್ವ ರದ್ದು; ಗಾಯತ್ರಿ ಶಾಂತೇಗೌಡ ಮೇಲುಗೈ!

• ಉದಯವಾಹಿನಿ, ಬೆಂಗಳೂರು

ಪರಿಷತ್ ಸದಸ್ಯತ್ವ ರದ್ದತಿಯನ್ನು ಪ್ರಶ್ನಿಸಿ ವಿಧಾನ ಪರಿಷತ್ ಉಪ ಸಭಾಪತಿ ಎಂ.ಕೆ. ಪ್ರಾಣೇಶ್ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿದೆ. ಚಿಕ್ಕಮಗಳೂರು ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ವಿಧಾನ ಪರಿಷತ್‌ಗೆ ಆಯ್ಕೆಯಾಗಿದ್ದ ಅವರ ಸದಸ್ಯತ್ವವನ್ನು ರದ್ದುಪಡಿಸಲಾಗಿದೆ. ಈ ಸಂಬಂಧ ಎಂಕೆ ಪ್ರಾಣೇಶ್ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿದ್ದು, ಪ್ರತಿಸ್ಪರ್ಧಿ ಗಾಯತ್ರಿ ಶಾಂತೇಗೌಡ ಅವರಿಗೆ ಮೇಲುಗೈ ಸಾಧಿಸಿದ್ದಾರೆ.ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಹಾಗೂ ನ್ಯಾಯಮೂರ್ತಿಗಳಾದ ಜಾಯ್ ಮಲ್ಯ ಬಾಗ್ಚಿ ಮತ್ತು ವಿಪುಲ್ ಎಂ. ಪಂಚೋಲಿ ಅವರನ್ನೊಳಗೊಂಡ ಪೀಠವು ಈ ತೀರ್ಪು ನೀಡಿದೆ. ಚಿಕ್ಕಮಗಳೂರು ಕ್ಷೇತ್ರದಿಂದ ವಿಧಾನ ಪರಿಷತ್ ಸ್ಥಾನಕ್ಕೆ 2021ರ ಡಿಸೆಂಬರ್‌ನಲ್ಲಿ ನಡೆದ ಚುನಾವಣೆಯಲ್ಲಿ ಬಿಜೆಪಿಯಿಂದ ಎಂ.ಕೆ. ಪ್ರಾಣೇಶ್ ಸ್ಪರ್ಧಿಸಿದ್ದರೆ, ಕಾಂಗ್ರೆಸ್ ನಿಂದ ಗಾಯತ್ರಿ ಶಾಂತೇಗೌಡ ಸ್ಪರ್ಧಿಸಿದ್ದರು.

# ಸರ್ಕಾರವೇಕೋ ಮೈಸೂರಿನಲ್ಲಿ ಕಂಬಳ ನಡೆಸಬೇಕೆಂಬ ಹಠಕ್ಕೆ ಬಿದ್ದಂತಿದೆ: ಮಾಜಿ ಸಚಿವ ಸುನೀಲ್ ಕುಮಾರ್

## ದಸರಾದಲ್ಲಿ ಕಂಬಳ ಆಯೋಜನೆಗೂ ಮುನ್ನ ಸರ್ಕಾರ ದೃಷ್ಟಿಕೋನಗಳಿಂದಲೂ ಯೋಚನೆ ಮಾಡಬೇಕಾದ ಅಗತ್ಯ

• ಉದಯವಾಹಿನಿ, ಬೆಂಗಳೂರು

ಸರ್ಕಾರವೇಕೋ ಮೈಸೂರಿನಲ್ಲಿ ಕಂಬಳ ನಡೆಸಲೇಬೇಕೆಂಬ ಹಠಕ್ಕೆ ಬಿದ್ದಿರುವುದು ಮೇಲ್ನೋಟಕ್ಕೆ ಭಾಸವಾಗುತ್ತಿದೆ. ಆದರೆ ಈ ಬಗ್ಗೆ ನಿರ್ಣಯಕ್ಕೆ ಬರುವ ಮೊದಲು ದೃಷ್ಟಿಕೋನಗಳಿಂದಲೂ ಯೋಚನೆ ಮಾಡಬೇಕಾದ ಅಗತ್ಯವಿದೆ ಎಂದು ಮಾಜಿ ಸಚಿವ ಸುನಿಲ್ ಕುಮಾರ್ ತಿಳಿಸಿದ್ದಾರೆ.

ವಿಧಾನಸೌಧದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕಂಬಳ ಕರಾವಳಿಯ ಸಾಂಸ್ಕೃತಿಕ ಕ್ರೀಡೆ. ಇದಕ್ಕೆ ಅದರದ್ದೇ ಆದ ಇತಿಹಾಸ ಹಾಗೂ ಸ್ಥಳೀಯ ಮೆರಗುಗಳಿವೆ. ಭಾಷೆ, ಸಂಸ್ಕೃತಿ, ಕಲೆ, ಆಚರಣೆಗಳು ಪ್ರದೇಶದಿಂದ ಪ್ರದೇಶಕ್ಕೆ ಬದಲಾಗುವುದು ಮಾತ್ರವಲ್ಲ, ಅದರ ಆಕರ್ಷಣೆ ಹಾಗೂ ಮೆಚ್ಚುವಿಕೆಯಲ್ಲೂ ವ್ಯತ್ಯಾಸಕ್ಕೆ ಒಳಪಡುತ್ತವೆ. ಹೀಗಾಗಿ ಕರಾವಳಿಯ ಕ್ರೀಡೆಯನ್ನು ದಸರಾ ಉತ್ಸವದ ಕಾರಣಕ್ಕಾಗಿ ಮೈಸೂರಿಗೆ ರಫ್ತು ಮಾಡುವಾಗ ಅದರಿಂದಾಗುವ ಒಟ್ಟಾರೆ ಪರಿಣಾಮವನ್ನೂ ನಿಷ್ಕರ್ಷೆಗೆ ಒಳಪಡಿಸುವುದು ಅತ್ಯಗತ್ಯ. ಹೀಗಾಗಿ ಮೈಸೂರಿನಲ್ಲಿ ಕಂಬಳ ನಡೆಸಬೇಕೋ ಬೇಡವೋ ಎಂಬ ಬಗ್ಗೆ ಸರ್ಕಾರ ಮೈಸೂರಿನ ಜನಪ್ರತಿನಿಧಿಗಳ ಜೊತೆಗೆ ಚರ್ಚೆ ನಡೆಸುವುದಕ್ಕೆ ಮುನ್ನ ಕರಾವಳಿಯ ಕಂಬಳ ಆಯೋಜಕರು ಹಾಗೂ ಕೋಣಗಳ ಮಾಲೀಕರ ಜೊತೆಗೂ ಸಮಾಲೋಚನೆ ನಡೆಸಿ ಆ ಬಳಿಕ ನಿರ್ಧಾರಕ್ಕೆ ಬರುವುದು ಒಳಿತು ಎಂದರು. **ಕಂಬಳಕ್ಕೆ 8 ಕೋಟಿ ರೂ. ಖರ್ಚು ಮಾಡಲು ಚಿಂತನೆ:** ಈಗಾಗಲೇ ಲಭಿಸಿರುವ ಮಾಹಿತಿ ಪ್ರಕಾರ ದಸರಾದಲ್ಲಿ ನಡೆಯುವ ಕಂಬಳಕ್ಕೆ ಸುಮಾರು 8 ಕೋಟಿ




ರೂ. ಖರ್ಚು ಮಾಡುವುದಕ್ಕೆ ರಾಜ್ಯ ಸರ್ಕಾರ ಚಿಂತನೆ ನಡೆಸಿದೆ. ಈ ಮಾಹಿತಿಯನ್ನು ಕೇಳಿ ನನಗೆ ಅಚ್ಚರಿಯಾಯ್ತು. ಏಕೆಂದರೆ ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ನಡೆಯುವ ಕಂಬಳಗಳಿಗೆ ಈ ಸರ್ಕಾರ ಬಂದ ನಂತರ ತಲಾ 2.5 ಲಕ್ಷ ರೂ. ನೀಡುವುದಕ್ಕೂ ಹಿಂದೆಮುಂದೆ ನೋಡಿದೆ. ನಾವು ಈ ಬಗ್ಗೆ ಪಕ್ಷಾತೀತವಾಗಿ ಸದನದಲ್ಲಿ ಮಾತನಾಡಿದ್ದೇವೆ. ಹೀಗಾಗಿ ಜಿಲ್ಲಾಮಟ್ಟದ 20 ಕಂಬಳಗಳಿಗೆ ತಲಾ 25 ಲಕ್ಷ ರೂ. ನೀಡುವುದಕ್ಕೆ ರಾಜ್ಯ ಸರ್ಕಾರ ಮೊದಲು ನಿರ್ಧಾರ ತೆಗೆದುಕೊಳ್ಳಬೇಕು. ಆಗ ಕಂಬಳಗಳ ವೈಭವ ಇನ್ನಷ್ಟು ಹೆಚ್ಚುತ್ತದೆ ಎಂದು ಹೇಳಿದರು.ಕಂಬಳವನ್ನು ನೋಡುವುದಕ್ಕೆ ರಾಜ್ಯದ ನಾನಾ ಭಾಗಗಳಿಂದ ಜನರು ಬರುವಂತಾಗುವ ವಾತಾವರಣವನ್ನು ಸ್ಥಳೀಯ ಭಾಗಿದಾರಿಕೆಯಲ್ಲಿ




ಸರ್ಕಾರ ನಿರ್ಮಾಣ ಮಾಡಬೇಕು. ಮೈಸೂರು ದಸರಾದಲ್ಲಿ ಕಂಬಳ ನಡೆಸುವ ತೀರ್ಮಾನಕ್ಕೆ ಮುನ್ನ ಇಲ್ಲಿನ ಆಯೋಜಕರು ಹಾಗೂ ಕೋಣದ ಮಾಲೀಕರ ಜತೆಗೆ ಮೊದಲು ಸರ್ಕಾರ ಸಭೆ ನಡೆಸಲಿ ಎಂದು ಸ್ಥಳೀಯ ಜನಪ್ರತಿನಿಧಿಯಾಗಿ, ಕಂಬಳದ ಆಯೋಜಕನೂ ಆಗಿ ನಾನು ಒತ್ತಾಯಿಸುತ್ತೇನೆ ಎಂದರು.

### ತಪ್ಪು ಮಾಡಿಲ್ಲ ಅಂದ್ರೆ ಹೆದರುವ ಅವಶ್ಯಕತೆ ಇಲ್ಲ

ಬಿಡದಿ ವಿಚಾರದಲ್ಲಿ ಸಿಎಂ ಒಬ್ಬಂಟಿಯೇ. ಸಿಎಂ ಸುದೀರ್ಘ ಮಾಧ್ಯಮಗೋಷ್ಠಿ ನೋಡಿದೆ. ಇಷ್ಟು ಸುದೀರ್ಘ ಮಾಧ್ಯಮಗೋಷ್ಠಿ ಯಾವ ಸಿಎಂ ಮಾಡಿರಲಿಲ್ಲ. ಜೈಲಿಗೆ ಹೋಗಬೇಕೋ, ಬೇಡವೋ ಅಂತ ನಾವು ಹೇಳಲ್ಲ. ಸಿಎಂಗೆ ತಪ್ಪು ಮಾಡಿರೋದು ಜಾಗೃತ ಆಗಿದೆಯೇನೋ ಗೊತ್ತಿಲ್ಲ. ತಪ್ಪು ಮಾಡಿಲ್ಲ ಅಂದ್ರೆ ಹೆದರುವ ಅವಶ್ಯಕತೆ ಇಲ್ಲ. ಎಲ್ಲರೂ ಅದನ್ನು ಸ್ವೀಕೃತ ಮಾಡಬೇಕು ಎಂದರು.

### ಜನಪ್ರತಿನಿಧಿಗಳ ಜತೆಗೆ ಚರ್ಚೆ

### ಧರ್ಮಸ್ಥಳ ಷಡ್ಯಂತ್ರ ಯಾರು ಮಾಡಿದ್ದಾರೆ ಅಂತ ಹೇಳಬೇಕು

ಧರ್ಮಸ್ಥಳ ಪ್ರಕರಣ ತನಿಖೆ ಸಂಬಂಧ ಅಂತಿಮ ಆರೋಪ ಪಟ್ಟಿ ಸಲ್ಲಿಕೆ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಧರ್ಮಸ್ಥಳ ಕುರಿತು ಸುಧೀರ್ಘ ಚರ್ಚೆ ಸದನದಲ್ಲಿ ಆಗಿದೆ. ನ್ಯಾಯಾಲಯಕ್ಕೆ ಅಧಿಕಾರಿಗಳು ವರದಿ ಕೊಟ್ಟಿದ್ದಾರೆ. ಸ್ವತಃ ಸಿಎಂ ಅವರು ಹಿಂದೆ ಡಿಸಿಎಂ ಆಗಿದ್ದಾಗ ಷಡ್ಯಂತ್ರ ಅಂತ ಹೇಳಿದ್ರು. ಈಗ ಯಾರು ಷಡ್ಯಂತ್ರ ಮಾಡಿದ್ದಾರೆ ಅಂತ ಹೇಳಬೇಕು. ಹೇಳದಿದ್ರೆ ನಿಮಗೆ ಧರ್ಮಸ್ಥಳ ಪರವಾಗಿ ನಿಲುವು ಏನು ಅಂತ ತಿಳಿಯಲಿದೆ. ಈವರೆಗೂ ಯಾರ ಮೇಲೂ ಕ್ರಮ ಆಗಿಲ್ಲ. ನ್ಯಾಯಾಲಯದ ವರದಿ ಮೇಲೆ ಕ್ರಮ ಆಗಬೇಕು. ಸಾರ್ವಜನಿಕವಾಗಿ ಹೇಳೋದು ಸರ್ಕಾರದ ಕರ್ತವ್ಯ ಎಂದು ಶಾಸಕ ಸುನೀಲ್ ಕುಮಾರ್ ತಿಳಿಸಿದರು.

